# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 115 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 21–11–2024 ಗುರುವಾರ | ಪುಟ: 4 | ಬೆಲೆ : ರೂ.2–00
Volume - 02 Issue - 115 | RNI No: KARKAN/2023/88462 | Chitradurga | Date: 21-11-2024 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಮತದಾರರ ಪಟ್ಟಿ ಪರಿಷ್ಕರಣೆಗೆ ಎಲ್ಲರ ಸಹಕಾರ ಮುಖ್ಯ 2

ಬಿಜೆಪಿ ಸದಸ್ಯತ್ವ ನೋಂದಣಿಗೆ ನ.25 ರವರೆಗೆ ಕಾಲಾವಕಾಶ: ದತ್ತಾತ್ರೇಯ 3

ತಾಯಿ ಮರಣ, ಹೆರಿಗೆ ಶಸ್ತ್ರ ಚಿಕಿತ್ಸೆ ಪ್ರಮಾಣ ತಗ್ಗಿಸಲು ಕ್ರಮಕ್ಕೆ ಸೂಚನೆ: ದಿನೇಶ್ 4



ಸುದ್ದಿ, ಜಾಹಿರಾತಿಗೆ 9686622252


# ಆಸ್ಪತ್ರೆ, ಶಾಲೆ, ಅಂಗನವಾಡಿ ಕೇಂದ್ರಗಳಲ್ಲಿ ಶೌಚಾಲಯ ಸುಸ್ಥಿತಿಯಲ್ಲಿರಲಿ: ಸಿಇಓ

» ಚಿತ್ರದುರ್ಗ

ಜಿಲ್ಲೆಯಲ್ಲಿನ ವಸತಿನಿಲಯಗಳು, ಆಸ್ಪತ್ರೆ, ಶಾಲೆ, ಅಂಗನವಾಡಿ ಕೇಂದ್ರಗಳಲ್ಲಿ ಶೌಚಾಲಯಗಳು ಸುಸ್ಥಿತಿಯಲ್ಲಿರುವಂತೆ ಅಗತ್ಯ ಕ್ರಮವಹಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ವಿಶ್ವ ಶೌಚಾಲಯ ದಿನಾಚರಣೆ ಪ್ರಯುಕ್ತ ಶೌಚಾಲಯ ಮತ್ತು ನೀರು ನಿರ್ವಹಣೆ ಕುರಿತು ಚರ್ಚಿಸಲು ಜಿಲ್ಲಾ ನೀರು ಮತ್ತು ನೈರ್ಮಲ್ಯ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಆಸ್ಪತ್ರೆ, ಶಾಲೆ, ಅಂಗನವಾಡಿ ಕೇಂದ್ರಗಳಲ್ಲಿರುವ ಶೌಚಾಲಯಗಳು ಸಣ್ಣಪುಟ್ಟ ದುರಸ್ಥಿಗಳಿದ್ದರೆ ಲಭ್ಯವಿರುವ ಅನುದಾನ ಬಳಸಿಕೊಂಡು ಅವುಗಳನ್ನು ಬಳಕೆಗೆ ಯೋಗ್ಯ ರೀತಿಯಲ್ಲಿ ಪರಿವರ್ತಿಸಬೇಕು ಎಂದು ಸೂಚಿಸಿದರು.

ಗ್ರಾಮೀಣ ಸಮುದಾಯದಲ್ಲಿ ಸುರಕ್ಷಿತ ನೈರ್ಮಲ್ಯ, ಶುಚಿತ್ವ ಕುರಿತು ಜಾಗೃತಿ ಮೂಡಿಸಿ ಶೌಚಾಲಯಗಳನ್ನು ನಿರಂತರವಾಗಿ ಬಳಸುವಂತೆ ಪ್ರೇರೇಪಿಸುವ ಉದ್ದೇಶದೊಂದಿಗೆ ವಿಶ್ವ ಶೌಚಾಲಯ ದಿನ ಆಚರಿಸಲಾಗುತ್ತಿದೆ. ನ.19 ರಿಂದ ಡಿ.20ರ ವರೆಗೆ ಜಿಲ್ಲೆಯಾದ್ಯಂತ ನಮ್ಮ ಶೌಚಾಲಯ ನಮ್ಮ ಗೌರವ ಆಂದೋಲನ ಹಮ್ಮಿಕೊಳ್ಳಲಾಗಿದೆ.

ಅಂದದ ಶೌಚಾಲಯ–ಆನಂದದ ಜೀವನ ಎಂಬ ಘೋಷ ವಾಕ್ಯದೊಂದಿಗೆ ತಾಲ್ಲೂಕು ಹಾಗೂ



ಗ್ರಾಮ ಪಂಚಾಯಿತಿಗಳಲ್ಲಿ ವಿಶೇಷ ಆಂದೋಲನ ನಡೆಸಿ ಸಾರ್ವಜನಿಕರಿಗೆ ಅರಿವು ಮೂಡಿಸಲಾಗುವುದು. ಈ ದಿನಾಚರಣೆಯು ಬಹಿರ್ದೆಸೆ ಮುಕ್ತ ಸ್ಥಿತಿಯ ಸ್ಥಾನಮಾನವನ್ನು ಉಳಿಸಿಕೊಳ್ಳುವಲ್ಲಿ ಪ್ರಮುಖ ಪಾತ್ರವಹಿಸುತ್ತದೆ ಎಂದು ತಿಳಿಸಿದ ಅವರು, ಗ್ರಾಮ ಪಂಚಾಯಿತಿ ಹಂತದಲ್ಲಿ ಸ್ವಚ್ಚ, ಸುಂದರ ವೈಯಕ್ತಿಕ ಗೃಹ ಶೌಚಾಲಯ (ಉತ್ತಮ ಶೌಚಾಲಯ)ಸ್ಪರ್ಧೆಯನ್ನು ಆಯೋಜಿಸಬೇಕು. ಅದೇ ರೀತಿ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಉತ್ತಮ ಸಮುದಾಯ ಶೌಚಾಲಯ ಸ್ಪರ್ಧೆಗಳನ್ನು ಆಯೋಜಿಸಬೇಕು. ತದನಂತರ ಜಿಲ್ಲಾ ಮತ್ತು ತಾಲ್ಲೂಕು ಹಂತದಲ್ಲಿ ವಿಜೇರಿಗೆ ಪುರಸ್ಕಾರಗಳನ್ನು ನೀಡಿ ಗೌರವಿಸುವಂತೆ ತಿಳಿಸಿದರು.

ಸ್ಥಳೀಯ ಪ್ರಭಾವಿಗಳು, ಸ್ವಚ್ಛತಾ ರಾಯಬಾರಿಗಳನ್ನು ಗುರುತಿಸಿ, ಅವರುಗಳನ್ನು ಈ ನಮ್ಮ ಶೌಚಾಲಯ–ನಮ್ಮ ಗೌರವ ವಿಶೇಷ ಆಂದೋಲನದಲ್ಲಿ ತೊಡಗಿಸಿಕೊಳ್ಳುವಂತೆ ಕ್ರಮವಹಿಸಬೇಕು. ಜಿಲ್ಲೆಯಲ್ಲಿರುವ ಕೈಗಾರಿಕೆಗಳು, ಸ್ವಯಂ ಸೇವಾ ಸಂಘಗಳು, ಸರ್ಕಾರೇತರ ಸಂಸ್ಥೆಗಳು, ಶಿಕ್ಷಣ ಸಂಸ್ಥೆಗಳು, ಇತರೆ ಸಾಂಸ್ಥಿಕ ಸಂಸ್ಥೆಗಳನ್ನು ಗುರುತಿಸಿ, ಈ ಆಂದೋಲನದ ಭಾಗವಾಗಿರುವ ಫಲಾನುಭವಿಗಳಿಗೆ ಪುರಸ್ಕಾರ ವಿತರಣೆ, ಶೌಚಾಲಯಗಳ ಸೌಂದರ್ಯೀಕರಣ ಪುರಸ್ಕಾರ ನೀಡುವ ಕಾರ್ಯದಲ್ಲಿ ತೊಡಗಿಕೊಳ್ಳುವುದು. ಉತ್ತಮ ಯಶೋಗಾಥೆ ಮತ್ತು ಉತ್ತಮ ಅಭ್ಯಾಸಗಳ ಕುರಿತು ವರದಿಗಳನ್ನು ಸಿದ್ದಪಡಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ನಿರುಪಯುಕ್ತ ಸಮುದಾಯ ಶೌಚಾಲಯಗಳನ್ನು ಗುರುತಿಸುವುದು ಮತ್ತು ಅವುಗಳನ್ನು ಬಳಕೆಗೆ ಯೋಗ್ಯ ರೀತಿಯಲ್ಲಿ ಪರಿವರ್ತಿಸಬೇಕು. ನೈರ್ಮಲ್ಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿರುವ ಸ್ವಚ್ಛತಾ ಕಾರ್ಮಿಕರು, ಸ್ವಚ್ಛತಾಗಾರರನ್ನು ಗುರುತಿಸಿ, ತಾಲ್ಲೂಕುವಾರು ಗ್ರಾಮ ಪಂಚಾಯಿತಿ ಸ್ವಚ್ಛತಾಗಾರರಿಗೆ ಆರೋಗ್ಯ ಶಿಬಿರ ಹಾಗೂ ಸುರಕ್ಷಾ ಕವಚಗಳನ್ನು ನೀಡಬೇಕ ಹಾಗೂ ವಿವಿಧ ಯೋಜನೆಗಳಡಿ ದೊರೆಯುವ ಸೌಲಭ್ಯಗಳನ್ನು ಒದಗಿಸಲು ನೋಂದಾಯಿಸುವುದು ಮತ್ತು ಮಂಜೂರಾತಿ ಆದೇಶಗಳನ್ನು ನೀಡಲು ಕ್ರಮವಹಿಸಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಬಯಲು ಬಹಿರ್ದೆಸೆ ಮುಕ್ತ ಸುಸ್ಥಿರತೆಯನ್ನು ಕಾಯ್ದುಕೊಳ್ಳುವಲ್ಲಿ ಗಣನೀಯ ಕೊಡುಗೆ ನೀಡಿದವರನ್ನು ಗುರುತಿಸಿ, ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿ ಹಂತದಲ್ಲಿ ಗೌರವಿಸಬೇಕು ಎಂದು ತಿಳಿಸಿದ ಅವರು, ಜಿಲ್ಲೆ, ತಾಲ್ಲೂಕು, ಗ್ರಾಮ ಪಂಚಾಯಿತಿ ಮತ್ತು ಗ್ರಾಮಗಳ ಮಟ್ಟದಲ್ಲಿ ಶೌಚಾಲಯ ಬಳಕೆ ಮತ್ತು ಉತ್ತಮ ನೈರ್ಮಲ್ಯ ಅಭ್ಯಾಸಗಳನ್ನು ರೂಢಿಸುವ ನಿಟ್ಟಿನಲ್ಲಿ ಜನರ ನಡವಳಿಕೆ ಬದಲಾವಣೆ ಮಾಡಲು ವಿಶೇಷ ಆಂದೋಲನಗಳಿಗೆ ಚಾಲನೆ ನೀಡುವಂತೆ ಸಲಹೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಗಾಯತ್ರಿ, ಗ್ರಾಮೀಣ ಕುಡಿಯುವ ನೀರು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಇಂಜಿನಿಯರ್ ಬಸನಗೌಡ ಪಾಟೀಲ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

## ಫಾಸ್ಟ್ ನ್ಯೂಸ್

### ಸರ್ಕಾರಿ ನೌಕರರ ಸಂಘ: ಚುನಾವಣೆ ವೇಳಾಪಟ್ಟಿ

» ಚಿತ್ರದುರ್ಗ

2024–29 ಸಾಲಿನ ಅವಧಿಗೆ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಶಾಖೆಯ ಜಿಲ್ಲಾಧ್ಯಕ್ಷ, ಜಿಲ್ಲಾ ಖಜಾಂಜಿ ಹಾಗೂ ರಾಜ್ಯ ಪರಿಷತ್ ಸದಸ್ಯರ ಆಯ್ಕೆಗೆ ಚುನಾವಣೆ ವೇಳಾಪಟ್ಟಿ ಪ್ರಕಟ ಮಾಡಲಾಗಿದೆ. ನ.19 ರಂದು ನ.27 ವರೆಗೆ ಪ್ರತಿದಿನ ಬೆಳಿಗ್ಗೆ 11 ಗಂಟೆಯಿಂದ ಸಂಜೆ 5 ಗಂಟೆವರೆಗೆ ನಾಮಪತ್ರ ಸಲ್ಲಿಕೆಗೆ ಅವಕಾಶವಿದೆ. ನ.28 ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ಅಂದೆ ಪರಿಶೀಲನೆ ನಂತರ ಅರ್ಹ ಅಭ್ಯರ್ಥಿಗಳ ಹೆಸರು ಪ್ರಕಟಿಸಲಾಗುವುದು. ನ.29 ರಂದು ಬೆಳಿಗ್ಗೆ 11 ಗಂಟೆಯಿಂದ ಸಂಜೆ 4:30 ಗಂಟೆಯವರೆಗೆ ನಾಮಪತ್ರ ಹಿಂಪಡೆಯಲು ಅವಕಾಶವಿದೆ. ತದನಂತರ ಅಂತಿಮವಾಗಿ ಕಣದಲ್ಲಿ ಉಳಿದ ಅಭ್ಯರ್ಥಿಗಳ ಹೆಸರು ಪ್ರಕಟಿಸಲಾಗುವುದು. ಡಿ.4 ರಂದು ಬೆಳಿಗ್ಗೆ 9 ಗಂಟೆಯಿಂದ ಮಧ್ಯಾಹ್ನ 4 ಗಂಟೆ ವರೆಗೆ ನಗರದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಕಚೇರಿಯಲ್ಲಿ ಮತದಾನ ನಡೆಯಲಿದೆ. ಮತದಾನ ಮುಕ್ತಾಯವಾದ ನಂತರ ಮತಣ ಎಣಿಕೆ ನಡೆಸಿ, ಫಲಿತಾಂಶ ಪ್ರಕಟಿಸಲಾಗುವುದು. ಜಿಲ್ಲೆಯ ಎಲ್ಲಾ ತಾಲ್ಲೂಕು ಘಟಕಗಳ ಅಧ್ಯಕ್ಷರು ಸೇರಿದಂತೆ ಒಟ್ಟು 71 ಮತದಾರರು ಮತ ಚಲಾವಣೆ ಮಾಡಲಿದ್ದಾರೆ ಎಂದು ಚುನಾವಣಾಧಿಕಾರಿ ಡಿ.ಟಿ.ಜಗನ್ನಾಥ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನ.21ರಂದು ವಿದ್ಯುತ್ ವ್ಯತ್ಯಯ

» ಚಿತ್ರದುರ್ಗ

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದ ನಗರದ ವ್ಯಾಪ್ತಿಯಲ್ಲಿ 220 ಕೆ.ವಿ ಘಟಕದಲ್ಲಿ ತ್ರೈಮಾಸಿಕ ನಿರ್ವಹಣೆ ಕಾರ್ಯ ನಡೆಯಲಿದೆ. ಈ ಹಿನ್ನಲೆಯಲ್ಲಿ ವಿದ್ಯುತ್ ಕೇಂದ್ರದಿಂದ ಹೊರಹೊಮ್ಮುವ ಎಲ್ಲಾ 11 ಕೆ.ವಿ ಮಾರ್ಗಗಳಲ್ಲಿ ಬೆಳಿಗ್ಗೆ 10 ರಿಂದ ಸಂಜೆ 5ರ ವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ವಿದ್ಯುತ್ ಅಡಚಣೆಯಾಗುವ ಪ್ರದೇಶಗಳು: ಕಾಪರ್ ಮೈನ್ ಏರಿಯಾ, ಕ್ಯಾದಿಗೆರೆ, ಜೆ.ಎನ್.ಕೋಟೆ, ಕಾಸವರಹಟ್ಟಿ, ಪಲ್ಲವಗೆರೆ, ಇಂಡಸ್ಟ್ರಿಯಲ್ ಏರಿಯಾ, ಕೋಟೆ, ಜಿಲ್ಲಾ ಪಂಚಾಯತ್, ಸಜ್ಜನಕೆರೆ, ದಂಡಿನಕುರುಬರಹಟ್ಟಿ, ಕೆನ್ನೆಡಲು ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

### ಕನ್ನಡ ರಾಜ್ಯೋತ್ಸವ

» ಚಿತ್ರದುರ್ಗ

ಚಿತ್ರದುರ್ಗ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆಯ ವಿದ್ಯಾರ್ಥಿಗಳಿಂದ ನ.21 ರಂದು ಸಂಜೆ 4 ಗಂಟೆಗೆ ನಗರದ ತರಾಸು ರಂಗಮಂದಿರದಲ್ಲಿ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನುಹಮ್ಮಿಕೊಳ್ಳಲಾಗಿದೆ.ದಾವಣಗೆರೆ ವಿ.ವಿ.ಕುಲಪತಿ ಪ್ರೊ.ಬಿ.ಡಿ.ಕುಂಬಾರ ಕಾರ್ಯಕ್ರಮ ಉದ್ಘಾಟಿಸುವರು. ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ ನಿರ್ದೇಶಕ ಡಾ.ಬಿ.ವೈ.ಯುವರಾಜ್ ಅಧ್ಯಕ್ಷತೆ ವಹಿಸುವರು. ಮಕ್ಕಳ ಹೃದಯ ತಜ್ಞೆ ಡಾ.ವಿಜಯಲಕ್ಷ್ಮೀ ಬಾಳೆಕುಂದ್ರಿ ವಿಶೇಷ ಆಹ್ವಾನಿತರಾಗಿ ಹಾಗೂ ಅತಿಥಿಗಳಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ರೇಣುಪ್ರಸಾದ್, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ರವೀಂದ್ರ ಪಾಲ್ಗೊಳ್ಳುವರು.

### ಪಠ್ಯೇತರ ಕಾರ್ಯ ಚಟುವಟಿಕೆಗಳ ಉದ್ಘಾಟನೆ

» ಚಿತ್ರದುರ್ಗ

ಕಾಲೇಜು ಶಿಕ್ಷಣ ಇಲಾಖೆ ,ದಾವಣಗೆರೆ ವಿಶ್ವವಿದ್ಯಾಲಯ ಹಾಗೂ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ವತಿಯಿಂದ ಇದೇ ನ.22ರಂದು ಬೆಳಿಗ್ಗೆ 10.30ಕ್ಕೆ ನಗರದ ತ.ರಾ.ಸು ರಂಗಮಂದಿರದಲ್ಲಿ ಪಠ್ಯೇತರ ಕಾರ್ಯ ಚಟುವಟಿಕೆಗಳ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಶಾಸಕ ಕೆ.ಸಿ.ವೀರೇಂದ್ರ (ಪಪ್ಪಿ) ಕಾರ್ಯಕ್ರಮ ಉದ್ಘಾಟಿಸುವರು. ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಪ್ರಾಂಶುಪಾಲ ಡಾ.ಹೆಚ್.ಗುಡ್ಡದೇಶ್ವರಪ್ಪ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಶಿವಮೊಗ್ಗ ಸಹ್ಯಾದ್ರಿ ಕಲಾ ಕಾಲೇಜು ಕನ್ನಡ ಉಪನ್ಯಾಸಕಿ ಡಾ.ಜಿ.ಕೆ.ಪ್ರೇಮ, ಸಾಂಸ್ಕೃತಿಕ ಸಂಚಾಲಕ ಡಾ.ಶಿವಣ್ಣ, ಪತ್ರಾಂಕಿತ ವ್ಯವಸ್ಥಾಪಕ ಆರ್.ವೆಂಕಟೇಶ್ ಹಾಗೂ ಎಲ್ಲಾ ಸಮಿತಿ ಸಂಚಾಲಕರು, ಕಾಲೇಜಿನ ಭೋದಕ–ಭೋದಕೇತರ ಸಿಬ್ಬಂದಿಗ ಮತ್ತು ವಿದ್ಯಾರ್ಥಿಗಳು ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

## ವಿಕ್ರಂ ಗೌಡ ಹತ್ಯೆ: ನಕ್ಸಲ್ ಚಟುವಟಿಕೆ ನಿಗ್ರಹಿಸಲು ಎನ್ಕೌಂಟರ್

» ಬೆಂಗಳೂರು



ವಿಕ್ರಂಗೌಡ ಹಲವು ನಕ್ಸಲ್ ಪ್ರಕರಣಗಳಲ್ಲಿ ಪೊಲೀಸರಿಗೆ ಬೇಕಾದವನಾಗಿದ್ದು, ನಕ್ಸಲ್ ಚಟುವಟಿಕೆಯನ್ನು ನಿಗ್ರಹಿಸಲು ಆತನನ್ನು ಎನ್ ಕೌಂಟರ್ ಮಾಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.ಅವರು ಇಂದು ಬೆಂಗಳೂರಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.ನಕ್ಸಲ್ ಚಟುವಟಿಕೆಯಲ್ಲಿ ಪ್ರಮುಖವಾಗಿ ಭಾಗಿಯಾಗಿದ್ದ ವಿಕ್ರಂಗೌಡ ಅವರು ಎನ್ ಕೌಂಟರ್ ನಲ್ಲಿ ಹತನಾಗಿರುವ ಬಗ್ಗೆ ಪ್ರಗತಿಪರ ಚಿಂತಕರು ಅನುಮಾನಗಳನ್ನು ವ್ಯಕ್ತಪಡಿಸುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ವಿಕ್ರಂಗೌಡ ಅವರಿಗೆ ಶರಣಾಗುವಂತೆ ಆದೇಶ ನೀಡಲಾಗಿತ್ತು. ಆದರೆ ಅವರು ಶರಣಾಗಿರಲಿಲ್ಲ. ವಿಕ್ರಂಗೌಡ ಅವರನ್ನು ಹಿಡಿದವರಿಗೆ ಕೇರಳಸರ್ಕಾರ 25 ಲಕ್ಷ ಹಾಗೂ ಕರ್ನಾಟಕ ಸರ್ಕಾರ 5 ಲಕ್ಷ ಬಹುಮಾನವನ್ನು ಘೋಷಿಸಿತ್ತು ಎಂದು ವಿವರಿಸಿದರು.

**ನಬಾರ್ಡ್ ಸಾಲದ ಮೊತ್ತ ಹೆಚ್ಚಿಸುವಂತೆ ಕೇಂದ್ರ ಸಚಿವರಿಗೆ ಮನವಿ:** ನವದೆಹಲಿ ಪ್ರವಾಸದ ವಿವರ ನೀಡಿದ ಮುಖ್ಯಮಂತ್ರಿಗಳು, ನಾಳೆ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿಯಾಗಲು ಸಮಯ ಕೋರಲಾಗಿದೆ. ರಾಜ್ಯಕ್ಕೆ ನಬಾರ್ಡ್ ನಿಂದ ರಾಜ್ಯಕ್ಕೆ ನೀಡಲಾಗುವ ಸಾಲದ ಮೊತ್ತವನ್ನು ಕಳೆದ ವರ್ಷದ 5600 ಕೋಟಿ ರೂ.ಗಳಿಂದ , ಈ ವರ್ಷ 2340 ಕೋಟಿ ರೂ. ಗಳಿಗೆ ಇಳಿಸಲಾಗಿದೆ. ಆದ್ದರಿಂದ ಕೇಂದ್ರ ವಿತ್ತ ಸಚಿವರನ್ನು ಭೇಟಿಯಾಗಿ ಈ ಬಗ್ಗೆ ಮನವಿ ಮಾಡಿಕೊಳ್ಳಲಾಗುವುದು. ಈ ಮಧ್ಯೆ ಸಮಯಾವಕಾಶವಿದ್ದಲ್ಲಿ ಪಕ್ಷದ ವರಿಷ್ಠರನ್ನು ಭೇಟಿ ಮಾಡಲಾಗುವುದು ಎಂದರು.

## ಮೊದಲನೆಯ ಪತ್ನಿಗೆ ವರದಕ್ಷಿಣೆ ಕಿರುಕುಳ; ಹೆರಿಗೆಗೆ ಕಳಿಸಿ 2ನೇ ಮದುವೆಯಾದ ಭೂಪ

**ಚಳ್ಳಕೆರೆ:** ಪತಿ ಹಾಗೂ ಆತನ ಸಂಬಂಧಿಗಳು ವರದಕ್ಷಣೆ ಕಿರುಕುಳ ನೀಡಿ ದೌರ್ಜನ್ಯ ವೆಸಗುತ್ತಿದ್ದಾರೆಂದು ಆರೋಪಿಸಿ ವೆಂಕಟೇಶ್ವರ ನಗರದ ನಿವಾಸಿ ಮೌಲಾನಬಿ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ ನೊಂದ ಗೃಹಿಣಿ ಮೌಲಾನಬಿ ಕಳೆದ 2023 ರಲ್ಲಿ ಅಂಬೇಡ್ಕರ್‌ನಗರದನಿವಾಸಿ ಮಹಮ್ಮದ್ ಇರ್ಫಾನ್ ಅವರನ್ನು ಮದುವೆಯಾಗಿದ್ದು, ಒಂದು ವರ್ಷ ಕಾಲ ಗಂಡ, ಹೆಂಡತಿ ಅನ್ಯೂನ್ಯವಾಗಿ ದ್ದರು. ಮದುವೆ ಸಂದರ್ಭದಲ್ಲಿ 2ಲಕ್ಷ ಹಣಕ್ಕೆ ಇರ್ಫಾನ್ ಕಡೆಯವರು ಬೇಡಿಕೆ ಇಟ್ಟಿದ್ದು, ಮುಂದಿನ ದಿನಗಳಲ್ಲಿ ಕೊಡುವ ಭರವಸೆಯನ್ನು ಮೌಲಾನಬಿ ಪೋಷಕರು ನೀಡಿದ್ದರು.


ಪುಟ 2


ಪ್ರಮುಖ ಸುದ್ದಿ

# ರಾಜ್ಯಕ್ಕೆ ಸಮೃದ್ಧ ಬಂಡವಾಳ ಹರಿವು: ಸಿದ್ದರಾಮಯ್ಯ

» ಬೆಂಗಳೂರು

ಕೈಗಾರಿಕಾ ಕ್ಷೇತ್ರದ ಬಂಡವಾಳ ಹೂಡಿಕೆಯಲ್ಲಿ ರಾಜ್ಯವು ಸದ್ಯಕ್ಕೆ ದೇಶದಲ್ಲಿ ಮೂರನೇ ಸ್ಥಾನದಲ್ಲಿದ್ದು, 2025ರ ಜೂನ್ ವೇಳೆಗೆ ದ್ವಿತೀಯ ಸ್ಥಾನಕ್ಕೆ ಏರಲಿದೆ. ಈಗ ಆಗಿರುವ 54,427 ಕೋಟಿ ರೂ. ಹೂಡಿಕೆಯ ಜತೆಗೆ ಮುಂದಿನ ಆರೇಳು ತಿಂಗಳಲ್ಲಿ ಇನ್ನೂ 19,059 ಸಾವಿರ ಕೋಟಿ ರೂ. ಬಂಡವಾಳ ಹರಿದು ಬರುವುದು ಖಾತ್ರಿಯಾಗಿದೆ. ಈ ಮೂಲಕ ರಾಜ್ಯವು 73 ಸಾವಿರ ಕೋಟಿ ರೂ.ಗಳಿಗೂ ಹೆಚ್ಚಿನ ಹೂಡಿಕೆಯನ್ನು ಕಾಣಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬುಧವಾರ ಹೇಳಿದ್ದಾರೆ.

ಅವರು ಜಿಕೆವಿಕೆ ಆವರಣದಲ್ಲಿ ಆಯೋಜನೆಗೊಂಡಿರುವ ಇಂಡಿಯನ್ ಇನ್ಸಿಟ್ಯೂಟ್ ಆಫ್ ಮೆಟಲ್ಸ್ ಸಂಸ್ಥೆಯ 78ನೇ ವಾರ್ಷಿಕ ತಾಂತ್ರಿಕ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದರು.

ರಾಜ್ಯವು ಈ ವರ್ಷ ಈಗಾಗಲೇ 21 ವಿವಿಧ ಉದ್ಯಮಗಳೊಂದಿಗೆ ಒಡಂಬಡಿಕೆ ಮಾಡಿಕೊಂಡಿದೆ. ಇದರಿಂದ 46,375 ಕೋಟಿ ರೂ. ಬಂಡವಾಳ ಹರಿದು ಬರಲಿದ್ದು, 27 ಸಾವಿರಕ್ಕೂ ಹೆಚ್ಚು ಉದ್ಯೋಗಗಳು ಸೃಷ್ಟಿಯಾಗಲಿವೆ. ರಾಜ್ಯ ಮಟ್ಟದ ಏಕಗವಾಕ್ಷಿ ಸಮಿತಿಗಳ ಮೂಲಕ



90 ಸಾವಿರ ಕೋಟಿ ರೂ.ಗಳಿಗೂ ಹೆಚ್ಚಿನ ಹೂಡಿಕೆ ಆಗಲಿರುವಂತಹ ಒಟ್ಟು 669 ಕೈಗಾರಿಕಾ ಯೋಜನೆಗಳಿಗೆ ಅನುಮೋದನೆ ಕೊಡಲಾಗಿದೆ. ಇವುಗಳಿಂದಾಗಿ 1.73 ಲಕ್ಷಕ್ಕೂ ಹೆಚ್ಚು ಜನರಿಗೆ ಉದ್ಯೋಗಾವಕಾಶಗಳು ದೊರೆಯಲಿವೆ ಎಂದು ಅವರು ವಿವರಿಸಿದ್ದಾರೆ.

ಕೈಗಾರಿಕಾ ಅಭಿವೃದ್ಧಿಯ ಜತೆಯಲ್ಲೇ ಪರಿಸರ ಸಂರಕ್ಷಣೆ ಮತ್ತು ಎಲ್ಲರನ್ನೂ ಒಳಗೊಂಡಿರುವ ಬೆಳವಣಿಗೆಗಳ ಜತೆಗೆ ಸಮತೋಲನ ಸಾಧಿಸುವ ಸವಾಲು ನಮ್ಮ ಮುಂದಿದೆ. ಮೆಟಲ್ಸ್ (ಲೋಹಗಳು) ಮತ್ತು ಮೆಟೀರಿಯಲ್ಸ್ ವಲಯಗಳಲ್ಲಿ ಇವೆಲ್ಲವನ್ನೂ ಸಾಧ್ಯವಾಗಿಸುವಂತಹ ಸಂಶೋಧನೆ ಮತ್ತು ನಾವೀನ್ಯತಾ ಉಪಕ್ರಮಗಳಿಗೆಸರಕಾರವುಒತ್ತುನೀಡುತ್ತಿದೆ ಎಂದು ಅವರು ನುಡಿದಿದ್ದಾರೆ.

ಮೆಟಲ್ಸ್ ಮತ್ತು ಮೆಟೀರಿಯಲ್ಸ್ ಕ್ಷೇತ್ರವೂ ಸೇರಿದಂತೆ ಎಲ್ಲ ವಲಯಗಳಲ್ಲೂ ಕರ್ನಾಟಕವು ಪರಿಸರಸ್ನೇಹಿ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳುತ್ತಿದೆ. ಲೋಹ ಮತ್ತು ಅದಕ್ಕೆ ಪೂರಕವಾದ ವಲಯಗಳು ಆರ್ಥಿಕ ಅಭಿವೃದ್ಧಿಯ ಆಚೆಗೂ ತಮ್ಮ ಪ್ರಭಾವ ಬೀರುತ್ತವೆ. ಕ್ಷಿಪ್ರವಾಗಿ ಬೆಳವಣಿಗೆ ಕಾಣುತ್ತಿರುವ ಜಗತ್ತಿನಲ್ಲಿ ಉದ್ಭವಿಸುತ್ತಿರುವ ಸಂಕೀರ್ಣ ಸಮಸ್ಯೆಗಳಿಗೆ ಉದ್ಯಮಿಗಳು ಸರಿಯಾದ ಪರಿಹಾರವನ್ನು ಕಂಡುಕೊಳ್ಳಬೇಕಾದ ಅಗತ್ಯವಿದೆ ಎಂದು ಸಿದ್ದರಾಮಯ್ಯ ತಿಳಿಸಿದ್ದಾರೆ.ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಮಾತನಾಡಿ, 'ರಾಜ್ಯ ಸರಕಾರವು ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮಾತ್ರವಲ್ಲದೆ ಸೆಮಿಕಂಡಕ್ಟರ್, ವಿದ್ಯುನ್ಮಾನ, ಚಿಪ್ ವಿನ್ಯಾಸ, ನವೋದ್ಯಮ, ವಿದ್ಯುಚ್ಚಾಲಿತ ವಾಹನ ಮುಂತಾದ ಕ್ಷೇತ್ರಗಳಿಗೆ ಸಂಬಂಧಿಸಿದಂತೆಯೂ ಸಮರ್ಥ ನೀತಿಗಳನ್ನು ಹೊಂದಿದೆ. ಪ್ರತಿಭಾವಂತ ಮಾನವ ಸಂಪನ್ಮೂಲವನ್ನು ಕೌಶಲಪೂರ್ಣವನ್ನಾಗಿಸಿ, ಅವರೆಲ್ಲರನ್ನೂ ಉದ್ಯೋಗಕ್ಕೆ ಅರ್ಹರನ್ನಾಗಿ ಸಜ್ಜುಗೊಳಿಸಲಾಗುವುದು' ಎಂದರು.

ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಮಾತನಾಡಿ, ಉದ್ಯಮ ಕ್ಷೇತ್ರದಲ್ಲಿ ಈಗ ಡಿಜಿಟಲ್ ಉತ್ಪಾದನೆ, ಕೃತಕ ಬುದ್ಧಿಮತ್ತೆ ಮತ್ತು ಆಟೋಮೇಶನ್ ನಿರ್ಣಾಯಕವಾಗಿದ್ದು ಹೊಸ ಬಗೆಯ ಶಕ್ತಿಸಾಮರ್ಥ್ಯಗಳನ್ನು ತಂದುಕೊಟ್ಟಿವೆ. ಸುಧಾರಿತ ಅಲಾಯ್ಸ್, ಅತ್ಯಧಿಕ ಸಾಮರ್ಥ್ಯದ ಉಕ್ಕು ಮತ್ತು ಸುಸ್ಥಿರ ಮೆಟೀರಿಯಲ್ ಗಳಲ್ಲಿ ಕರ್ನಾಟಕವು ಮುಂಚೂಣಿಯಲ್ಲಿದೆ. ಈ ವಲಯದಲ್ಲಿ ರಾಜ್ಯದ ಹಲವು ನವೋದ್ಯಮಗಳು ಆಟೋಮೋಟೀವ್, ವೈಮಾಂತರಿಕ್ಷ, ಹಗುರಅಲಾಯ್‌ಗಳಲ್ಲಿಸಂಶೋಧನೆಯಲ್ಲಿ ತೊಡಗಿಸಿಕೊಂಡಿವೆ ಎಂದರು.ರಾಜ್ಯವು ಹೆವಿ ಎಂಜಿನಿಯರಿಂಗ್, ವಿದ್ಯುತ್ ಉತ್ಪಾದನೆ ಮತ್ತು ಸ್ಪೆಷಲ್ ಪರ್ಪಸ್ ಮಷಿನರಿ ಕ್ಷೇತ್ರಗಳ ತಾಣವಾಗಿದೆ. ಮಶೀನ್ ಟೂಲ್ ತಯಾರಿಕೆಯಲ್ಲಿ ದೇಶದ ಒಟ್ಟು ಉತ್ಪಾದನೆಯಲ್ಲಿ ಶೇ.52ರಷ್ಟು ಕೊಡುಗೆ ನೀಡುತ್ತಿದೆ. ಈ ಮೂಲಕ ಸ್ಥಳೀಯ ಮತ್ತು ಜಾಗತಿಕ ಮಾರುಕಟ್ಟೆಯ ಬೇಡಿಕೆಗಳನ್ನು ಏಕಕಾಲಕ್ಕೆ ಪೂರೈಸಲಾಗುತ್ತಿದೆ. ಲೋಹ ಮತ್ತು ಮೆಟೀರಿಯಲ್ಸ್ ವಲಯಗಳ ಬೇಡಿಕೆಗಳನ್ನು ಸರಕಾರವು ಸಕಾರಾತ್ಮಕವಾಗಿ ಪರಿಗಣಿಸಿ, ಎಲ್ಲ ಬಗೆಯ ಪ್ರೋತ್ಸಾಹಗಳನ್ನೂ ಕೊಡಲಿದೆ ಎಂದು ಅವರು ಭರವಸೆ ನೀಡಿದರು.

## ಫಾಸ್ಟ್ ನ್ಯೂಸ್

### ಫೆಲೋಶಿಪ್: ಎಸ್.ಟಿ. ವಿದ್ಯಾರ್ಥಿಗಳಿಂದ ಅರ್ಜಿ

» **ಚಿತ್ರದುರ್ಗ**

ರಾಜ್ಯದ ವಿಶ್ವವಿದ್ಯಾನಿಲಯಗಳಲ್ಲಿ ಪೋಸ್ಟ್ ಡಾಕ್ಟರಲ್ ಫೆಲೋಶಿಪ್ ಮಾಡುತ್ತಿರುವ 100 ಎಸ್.ಟಿ. ಸಂಶೋದನಾ ವಿದ್ಯಾರ್ಥಿಗಳಿಗೆ ಮಾಸಿಕ 25,000 ಸಾವಿರ ಶಿಷ್ಯವೇತನಕ್ಕೆ ಆಯ್ಕೆ ಮಾಡಲು ಪರಿಶಿಷ್ಟ ವರ್ಗಗಳ ಇಲಾಖೆಯಿಂದ ಅರ್ಜಿ ಆಹ್ವಾನಿಸಲಾಗಿದೆ. ಸರ್ಕಾರದ ಆಯವ್ಯಯದಲ್ಲಿ ಘೋಷಣೆಯಂತೆ ಯಾವುದೇ ಫೆಲೋಶಿಪ್ ಪಡೆಯದ ಎಸ್.ಟಿ. ಸಮುದಾಯಕ್ಕೆ ಸೇರಿದ ಸಂಶೋಧನ ವಿದ್ಯಾರ್ಥಿಗಳಿಗೆ ಫೆಲೋಶಿಫ್ ನೀಡಲಾಗುವುದು. ಡಿ.14 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಆಸಕ್ತ ಅರ್ಹ ಅಭ್ಯರ್ಥಿಗಳು ನಗರದ ಜೆ.ಸಿ.ಆರ್.ಬಡಾವಣೆ, ಗಣಪತಿ ದೇವಸ್ಥಾನದ ಹತ್ತಿರದ ಜಿಲ್ಲಾ ಪರಿಶಿಷ್ಟ ವರ್ಗಗಳ ಕಚೇರಿಯಲ್ಲಿ ಇದೇ ನ.21 ರಿಂದ ಅರ್ಜಿ ಪಡೆದು ಡಿ.14ರ ಸಂಜೆ 5.30ರೊಳಗೆ ಸಲ್ಲಿಸುವಂತೆ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

### ಮೊದಲನೆಯ ಪತ್ನಿಗೆ ವರದಕ್ಷಿಣೆ ಕಿರುಕುಳ; ಹೆರಿಗೆಗೆ ಕಳಿಸಿ 2ನೇ ಮದುವೆಯಾದ ಭೂಪ

» **ಮೊದಲ ಪುಟದಿಂದ**

ಮೌಲಾನಬಿ ಗರ್ಭಿಣಿಯಾಗಿದ್ದು, ಪತಿ ಮಹಮ್ಮದ್ ಇರ್ಫಾನ್ ಆಕೆಯನ್ನು ತವರು ಮನೆಗೆ ಹೆರಿಗೆಗೆ ಬಿಟ್ಟು ಬಂದು ಈಗ ಮತ್ತೊಂದು ಮದುವೆಯಾಗಿದ್ದಾನೆ. ಈ ಬಗ್ಗೆನೊಂದ ಪತ್ನಿ, ಪತಿ ಮಹಮ್ಮದ್ ಇರ್ಫಾನ್, ಸಜನಾಭಾನು, ಜೀನ ತಮ್ಮ, ಖಲೀಂವುಲ್ಲಾ, ಮಹಮ್ಮದ್ ರಫೀ, ಅನ್ವರಿ, ಇಮ್ರಾನ್, ರುಹಿನಾಭಾನು, ಶಫೀವುಲ್ಲಾ, ಸಾಹಿರ ಬಾಬು, ದಿಲ್‌ಶಾದ್ ವಿರುದ್ದ ಪ್ರಕರಣ ದಾಖಲಿಸಿದ್ದಾರೆ. ಪಿಎಸ್‌ಐ ಕೆ.ಸತೀಶ್ ನಾಯ್ಕ ಪ್ರಕರಣ ದಾಖಲಿಸಿ ತನಿಖೆ ಮುಂದುವರಿಸಿದ್ದಾರೆ.

### ನೆಲಗೇತನಹಟ್ಟಿ ಗ್ರಾಮ ಆಡಳಿತಾಧಿಕಾರಿ ಹರೀಶ್ ಲಂಚಸ್ವೀಕರಿಸುವಾಗ ಲೋಕಾಯುಕ್ತ ಬಲೆಗೆ

» **ಚಳ್ಳಕೆರೆ**

ತಾಲ್ಲೂಕಿನ ನಾಯಕನಹಟ್ಟಿ ಹೋಬಳಿಯ ನೆಲಗೇತನಹಟ್ಟಿ ಗ್ರಾಮ ಆಡಳಿತಾಧಿಕಾರಿ ಲಂಚಸ್ವೀಕರಿಸುವ ಸಂದರ್ಭದಲ್ಲಿ ಲೋಕಾಯುಕ್ತ ಪೋಲೀಸರ ಬಲೆಗೆ ಸಿಕ್ಕಿ ಬಿದ್ದಿದ್ದಾನೆ. ಬುಧವಾರ ಮಧ್ಯಾಹ್ನ ಸುಮಾರು 12.30ರ ಸಮಯದಲ್ಲಿ ಗ್ರಾಮದ ಚನ್ನಕೇಶವ ಎಂಬುವವರ ಜಮೀನು ಪೌತಿಖಾತೆಗೆ 10 ಸಾವಿರ ರೂ ಲಂಚ ಕೊಡುವಂತೆ ಗ್ರಾಮ ಆಡಳಿತಾಧಿಕಾರಿ ಹರೀಶ್ ಬೇಡಿಕೆ ಇಟ್ಟಿದ್ದಲ್ಲದೆ, ಕಚೇರಿಯಲ್ಲಿ ಚನ್ನಕೇಶವರಿಂದ ಹಣ ಪಡೆಯುವ ಸಂದರ್ಭದಲ್ಲಿ ಲೋಕಾಯುಕ್ತ ಅಧಿಕಾರಿ ವಾಸುದೇವ್ ಮತ್ತು ಸಿಬ್ಬಂದಿ ವರ್ಗ ಬೀಸಿದ ಬಲೆಗೆ ಸಿಕ್ಕಿದ್ದಾನೆ. ಈ ಬಗ್ಗೆ ಚನ್ನಕೇಶವ ಲೋಕಾಯುಕ್ತ ಪೊಲೀಸರಿಗೆ ಮಾಹಿತಿ ನೀಡಿದ್ದ ಎನ್ನಲಾಗಿದೆ. ಇದರ ಜೊತೆಗೆ ಸಹಕರಿಸಿದ ಬೋರೇಯ್ಯ ಎಂಬುವವರನ್ನು ಸಹ ಲೋಕಾಯುಕ್ತ ಪೊಲೀಸರು ವಶಕ್ಕೆ ಪಡೆದಿದ್ದಾರೆ.

### ಸಾರ್ವಜನಿಕ ಆಸ್ಪತ್ರೆಯಲ್ಲಿ ಉಚಿತ ಹೃದಯ ರೋಗ ತಪಾಸಣಾ ಶಿಬಿರ ನಾಳೆ

» **ಚಳ್ಳಕೆರೆ**

ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ ನ.22ರ ಗುರುವಾರ ಉಚಿತ ಹೃದಯರೋಗ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದ್ದು, ಚಿತ್ರದುರ್ಗದ ಇಂಡಿಯಾನಾ–ಎಸ್‌ಜೆಎಂ ಹಾರ್ಟ್ ಸೆಂಟರ್ ಸಹಯೋಗದಲ್ಲಿ ಈ ಕಾರ್ಯಕ್ರಮ ಏರ್ಪಡಿಸಿದೆ ಎಂದು ಆಡಳಿತಾಧಿಕಾರಿ ಡಾ.ಜೆ.ಡಿ.ವೆಂಕಟೇಶ್ ತಿಳಿಸಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ಆಸ್ಪತ್ರೆಯ ಕಾರ್ಯನಿರ್ವಾಹಕ ಅಧಿಕಾರಿ ಮರಿಸ್ವಾಮಿ, ಸುತ್ತಮುತ್ತಲ ಗ್ರಾಮಸ್ಥರು ಉಚಿತ ಹೃದಯರೋಗ ತಪಾಸಣಾ ಶಿಬಿರಕ್ಕೆ ಆಗಮಿಸಿ ಪರೀಕ್ಷೆಗೆ ಒಳಪಡುವಂತೆ ಮನವಿ ಮಾಡಿದ್ದಾರೆ. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲ್ಲೂಕು ಆರೋಗ್ಯ ಇಲಾಖೆ ಮತ್ತು ಸಾರ್ವಜನಿಕ ಆಸ್ಪತ್ರೆ ಸಹಕಾರದೊಂದಿಗೆ ಈ ಕಾರ್ಯಕ್ರಮ ನಡೆಯಲಿದೆ. ಬೆಳಗ್ಗೆ 10ರಿಂದ 2ರ ತನಕ ಶಿಬಿರದಲ್ಲಿ ಎದೆನೋವು, ರಕ್ತದೊತ್ತಡ, ಆಯಾಸ, ಉಸಿರಾಟ ತೊಂದರೆ, ಬೇವರುವುದು, ತಲೆಸುತ್ತು, ಮುಂತಾದ ಸಮಸ್ಯೆಗಳ ಬಗ್ಗೆ ತಪಾಸಣೆ ನಡೆಸಲಾಗುತ್ತದೆ. ಹೆಚ್ಚಿನ ಮಾಹಿತಿಗೆ 87922 63248, 87922 63250 ಸಂಪರ್ಕಿಸಬಹುದು.

### ಮದ್ಯ ಮಾರಾಟ ನಿಷೇಧ

» **ದಾವಣಗೆರೆ**

ಜಗಳೂರು ಪಟ್ಟಣ ಪಂಚಾಯತಿ ವಾರ್ಡ್ ನಂ.9 ರ ವ್ಯಾಪ್ತಿಯಲ್ಲಿ ನವೆಂಬರ್ 23 ರಂದು ಮತದಾನ ನಡೆಯಲಿದ್ದು, ಈ ವೇಳೆ ಕಾನೂನು ಸುವ್ಯವಸ್ಥೆ ಕಾಪಾಡುವ ಮುನ್ನೆಚ್ಚರಿಕೆ ಕ್ರಮವಾಗಿ ನವೆಂಬರ್ 22 ರಂದು ಸಂಜೆ 4 ಗಂಟೆಯಿಂದ ನ.24 ರ ಸಂಜೆ 6 ಗಂಟೆವರೆಗೆ ಬಾರ್ ಮತ್ತು ರೆಸ್ಟೋರೆಂಟ್, ಹೋಟೆಲ್ ಹಾಗೂ ಇನ್ನಿತರೆ ಸ್ಥಳಗಳಲ್ಲಿ ಮದ್ಯ ಮಾರಾಟ ನಿಷೇಧಿಸಿ ಮದ್ಯದಂಗಡಿ ಮುಚ್ಚಲು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಆದೇಶಿಸಿದ್ದಾರೆ.

---

ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣ ಸೊಸೈಟಿ ಸಭೆಯಲ್ಲಿ ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್ ಸೂಚನೆ

# ಆರೋಗ್ಯ ಕಾರ್ಯಕ್ರಮಗಳ ಅರಿವು ಮೂಡಿಸಿ

» **ಚಿತ್ರದುರ್ಗ**




ಆರೋಗ್ಯ ಕಾರ್ಯಕ್ರಮಗಳ ಕುರಿತು ಜನರಿಗೆ ಹೆಚ್ಚಿನ ರೀತಿಯಲ್ಲಿ ಅರಿವು ಮೂಡಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಹೇಳಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಬುಧವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸೊಸೈಟಿ ಸಭೆ ಹಾಗೂ ಆರೋಗ್ಯ ಇಲಾಖೆಯ ವಿವಿಧ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಆರೋಗ್ಯ ಇಲಾಖೆ ವಿವಿಧ ಆರೋಗ್ಯ ಕಾರ್ಯಕ್ರಮಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸಿ, ಯೋಜನೆಯ ಲಾಭ ಫಲಾನುಭವಿಗಳಿಗೆ ಪಡೆಯುವಂತೆ ಮಾಡಬೇಕು ಎಂದು ಸೂಚನೆ ನೀಡಿದರು.

ಅನಧಿಕೃತ ಗೈರು, ಸಿಬ್ಬಂದಿ ವಜಾ: ಎನ್‌ಹೆಚ್‌ಎಂ ಅಡಿ ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಚಳ್ಳಕೆರೆ ತಾಲ್ಲೂಕು ದೊಡ್ಡ ಉಳ್ಳಾರ್ತಿ ಪ್ರಾಥಮಿಕ ಆರೋಗ್ಯ ಕೇಂದ್ರದ ಘಟಪರ್ತಿ ಉಪಕೇಂದ್ರದ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಮಹಾಲಕ್ಷ್ಮೀ, ಹಿರಿಯೂರು ತಾಲ್ಲೂಕು ಬೇತೂರು ಪಾಳ್ಯ ಉಪಕೇಂದ್ರದ ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ಲತಾ, ಚಳ್ಳಕೆರೆ ತಾಲ್ಲೂಕು ತಳಕು ಪ್ರಾಥಮಿಕ ಆರೋಗ್ಯ ಕೇಂದ್ರದ ಶುಶ್ರೂಷಕಿ ಕೆ.ಸಿ.ಅಶ್ವಿನಿ, ದೊಡ್ಡಚೆಲ್ಲೂರು ಪ್ರಾಥಮಿಕ ಆರೋಗ್ಯ ಕೇಂದ್ರದ ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿ ಟಿ.ಜಯಲಕ್ಷ್ಮೀ ಹಾಗೂ ಹಿರಿಯೂರು ಸಾರ್ವಜನಿಕ ಆಸ್ಪತ್ರೆಯ ಶುಶ್ರೂಷಕಿ ಆರ್.ಲಕ್ಷ್ಮೀದೇವಿ ಅವರು ಅನಧಿಕೃತ ಗೈರು ಹಾಜರಿಯಾದ ಹಿನ್ನಲೆಯಲ್ಲಿ ಕರ್ತವ್ಯದಿಂದ ವಜಾಗೊಳಿಸಲು ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣ ಸೊಸೈಟಿ ಸಭೆಯಲ್ಲಿ ತೀರ್ಮಾನಗೊಳ್ಳಲಾಯಿತು.

ಆಶಾ ಕುಂದುಕೊರತೆ ಸಭೆ: ಜಿಲ್ಲಾ ಪಂಚಾಯಿತಿ ಸಿಇಒ ಅಧ್ಯಕ್ಷತೆಯಲ್ಲಿ ಆಶಾ ಕಾರ್ಯಕರ್ತರ ಕುಂದುಕೊರತೆ ಸಭೆ ನಡೆಯಿತು.

ಜಿಲ್ಲಾ ಆಸ್ಪತ್ರೆ ಹಾಗೂ ತಾಲ್ಲೂಕು ಆಸ್ಪತ್ರೆಗಳಲ್ಲಿ ಆಶಾ ವಿಶ್ರಾಂತಿ ಕೊಠಡಿಗೆ ವ್ಯವಸ್ಥೆ, ಸ್ಪರ್ಧಾತ್ಮಕ ಪರೀಕ್ಷೆ ಹಾಗೂ ಚುನಾವಣೆ ಸಂದರ್ಭಗಳಲ್ಲಿ ಆಶಾ ಕಾರ್ಯಕರ್ತರನ್ನು ನಿಯೋಜಿಸಿದಾಗ ಟಿಎ, ಡಿಎ ನೀಡಬೇಕು ಎಂಬುದು ಸೇರಿದಂತೆ ಆಶಾ ಕಾರ್ಯಕರ್ತರ ಬೇಡಿಕೆಗಳ ಮನವಿ ಮಾಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ಜಿ.ಪಂ ಸಿಇಒ, ಆರೋಗ್ಯ ಇಲಾಖೆಯ ಕಾರ್ಯಕ್ರಮಗಳಲ್ಲಿ ಆಶಾ ಕಾರ್ಯಕರ್ತರು ಉತ್ತಮವಾಗಿ ಸೇವೆ ನೀಡುತ್ತಿದ್ದಾರೆ. ಆಶಾ ಕಾರ್ಯಕರ್ತರನ್ನು ಗೌರವಯುತವಾಗಿ ನಡೆಸಿಕೊಳ್ಳಬೇಕು. ಜಿಲ್ಲಾಸ್ಪತ್ರೆ ಹಾಗೂ ತಾಲ್ಲೂಕು ಆಸ್ಪತ್ರೆಗಳಲ್ಲಿ ಆಶಾ ವಿಶ್ರಾಂತಿ ಕೊಠಡಿ ವ್ಯವಸ್ಥೆ ಮಾಡುವಂತೆ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ ಅವರಿಗೆ ಸೂಚಿಸಿದರು.

2019ರ ಜನಸಂಖ್ಯೆಯಂತೆ ಜಿಲ್ಲೆಯಲ್ಲಿ 1481 ಆಶಾ ಕಾರ್ಯಕರ್ತರು ಇದ್ದು, ಕೆಲಸ ಬಿಟ್ಟವರು, ಮರಣ ಇತ್ಯಾದಿ ಕಾರಣಗಳಿಂದಾಗಿ 1445 ಆಶಾ ಇದ್ದು, ಪ್ರಸ್ತುತ ಜನಸಂಖ್ಯೆಗೆ ಅನುಗುಣವಾಗಿ ಆಶಾ ಕಾರ್ಯಕರ್ತರ ನೇಮಕ ಮಾಡುವಂತೆ ಜಿಲ್ಲಾ ಆಶಾ ಮೆಂಟರ್ ಸಭೆಗೆ ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ರಾಷ್ಟ್ರೀಯ ಬಾಲಸ್ವಾಸ್ಥ್ಯ ಕಾರ್ಯಕ್ರಮ, ವಿಫ್ಸ್ ಕಾರ್ಯಕ್ರಮ (ಕಬ್ಬಿಣಾಂಶದ ಮಾತ್ರೆ), ಶುಚಿ ಕಾರ್ಯಕ್ರಮ, ರಾಷ್ಟ್ರೀಯ ಕಿಶೋರ್ ಸ್ವಾಸ್ಥ್ಯ ಕಾರ್ಯಕ್ರಮ ಹಾಗೂ ಜಂತುಹುಳು ನಿವಾರಣಾ ದಿನ ಅನುಷ್ಠಾನ ಕಾರ್ಯತಂತ್ರ ಕುರಿತು ಪ್ರಗತಿ ಪರಿಶೀಲನಾ ಸಭೆ ನಡೆಯಿತು. ರಾಷ್ಟ್ರೀಯ ಫ್ಲೋರೋಸಿಸ್ ನಿಯಂತ್ರಣ ಮತ್ತು ತಡೆಗಟ್ಟುವ ಕಾರ್ಯಕ್ರಮದ ಅಂಗವಾಗಿ ಪೋಸ್ಟರ್‌ಗಳನ್ನು ಬಿಡುಗಡೆಗೊಳಿಸಲಾಯಿತು.

ಕಾರ್ಯಕ್ರದಲ್ಲಿ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಅಭಿನವ್, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ, ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ್ ನಾಗಸಮುದ್ರ ಸೇರಿದಂತೆ ಆರೋಗ್ಯ ಇಲಾಖೆಯ ವಿವಿಧ ಕಾರ್ಯಕ್ರಮಗಳ ಅನುಷ್ಠಾನಾಧಿಕಾರಿಗಳು ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

---

15ನೇ ರಾಷ್ಟ್ರೀಯ ಮತದಾರರ ದಿನಾಚರಣೆ : ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ವಿವಿಧ ಸ್ಪರ್ಧೆ

## ಮತದಾರರ ಪಟ್ಟಿ ಪರಿಷ್ಕರಣೆಗೆ ಎಲ್ಲರ ಸಹಕಾರ ಮುಖ್ಯ

» **ಚಳ್ಳಕೆರೆ**



ಹದಿನೈದನೇ ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ಮತದಾರ ಸಾಕ್ಷರತಾ ಸಂಘದ ವತಿಯಿಂದ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಪ್ರಬಂಧ, ರಸಪ್ರಶ್ನೆ, ಬಿತ್ತಿಪತ್ರ ಸ್ಪರ್ಧೆಗಳನ್ನು ಹಮ್ಮಿಕೊಂಡು ಮತದಾನ ಜಾಗೃತಿ ಅಭಿಯಾನವನ್ನು ಯಶಸ್ವಿಗೊಳಿಸುವಂತೆ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಮನವಿ ಮಾಡಿದರು.

ಅವರು, ಬುಧವಾರ ಕಚೇರಿಯಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ಮತದಾರರ ದಿನಾಚರಣೆ ಹಿನ್ನೆಲೆಯಲ್ಲಿ ಹಮ್ಮಿಕೊಂಡಿದ್ದ ತಾಲ್ಲೂಕು ಮಟ್ಟದ ಸ್ಪರ್ಧಾತ್ಮಕ ಚಟುವಟಿಕೆಗಳನ್ನು ಗಿಡಕ್ಕೆ ನೀರು ಎರೆಯುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಬರುವ ಜ.2025ರ ರಾಷ್ಟ್ರೀಯ ಮತದಾರರ ದಿನಾಚರಣೆ ಪ್ರಮುಖ ಗಟ್ಟವಾಗಿದೆ. ಈಗಾಗಲೇ ಮತದಾರರ ಪಟ್ಟಿ, ಸೇರ್ಪಡೆ ಮತ್ತು ಬದಲಾವಣೆಯ ಬಗ್ಗೆ ಚುನಾವಣಾಶಾಖೆ ಸಾಕಷ್ಟು ಮಾಹಿತಿಯನ್ನು ನೀಡಿದೆ. ಗ್ರಾಮೀಣ ಪ್ರದೇಶದಲ್ಲೂ ಸಹ ರಾಷ್ಟ್ರೀಯ ಮತದಾರರ ದಿನಾಚರಣೆಯ ಬಗ್ಗೆ ಜನರಲ್ಲಿ ಅರಿವು ಮೂಡಿಸಲು ವಿದ್ಯಾರ್ಥಿಗಳಿಗೆ ಸ್ಪರ್ಧೆ ಹಮ್ಮಿಕೊಂಡಿದೆ. ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ಸುಗಮವಾಗಿ ನಡೆಯಲು ಎಲ್ಲರೂ ಕೈಜೋಡಿಸಬೇಕು ಎಂದರು.

ಜಿಲ್ಲಾ ನೋಡಲ್ ಅಧಿಕಾರಿ ಕೆ.ಜಿ.ಪ್ರಶಾಂತ್ ಮಾತನಾಡಿ, ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಶಾಲೆಗಳಲ್ಲಿ ಸ್ಪರ್ಧಾತ್ಮಕ ಕಾರ್ಯಕ್ರಮ ಹಮ್ಮಿಕೊಳ್ಳುವ ಮೂಲಕ ವಿದ್ಯಾರ್ಥಿಗಳಿಗೂ ಮತದಾನದ ಬಗ್ಗೆ ಹಾಗೂ ಮತದಾರರ ಪಟ್ಟಿಯ ಬಗ್ಗೆ ಮಾಹಿತಿ ನೀಡಲಾಗುತ್ತದೆ. ಮತದಾರರ ಪರಿಷ್ಕರಣೆ ಕಾರ್ಯ ತಾಲ್ಲೂಕಿನಾದ್ಯಂತ ಯಶಸ್ವಿಯಾಗಿ ನಡೆಯುತ್ತಿದೆ. ಮತದಾರರ ಪಟ್ಟಿ ಸಂಬಂಧಪಟ್ಟಂತೆ ನಿಯೋಜನೆಗೊಂಡ ಅಧಿಕಾರಿಗಳು ಚುನಾವಣಾ ಕಾರ್ಯವನ್ನು ಜಾಗ್ರತೆಯಿಂದ ಮಾಡುವಂತೆ ಮನವಿ ಮಾಡಿದರು.

ವಿಜೇತರ ಪಟ್ಟಿ :– ಕನ್ನಡಮಾದ್ಯಮ ಪ್ರಬಂಧ ಸ್ಪರ್ಧೆಯಲ್ಲಿ ಎಚ್‌ಟಿಟಿಪ್ರೌಢಶಾಲೆಯ ಸಿ.ಸ್ನೇಹ, ಪ್ರಥಮ ಸ್ಥಾನ, ಚೌಳೂರಿನ ಎಸ್‌ವಿಎಸ್ ಪ್ರೌಢಶಾಲೆಯ ಎಂ.ತನುಜ ದ್ವಿತೀಯ, ನಾಯಕನಹಟ್ಟಿಯ ಎಸ್‌ಟಿಎಸ್ ಶಾಲೆಯ ಜಿ.ಎಸ್.ಮಂಜುಳ ತೃತೀಯ ಸ್ಥಾನ, ಆಂಗ್ಲಮಾಧ್ಯಮದಲ್ಲಿ ವಾಸವಿ ವಿದ್ಯಾಸಂಸ್ಥೆಯ ಜಿ.ಎಲ್.ಜೀವಿತ ಪ್ರಥಮ, ಇನ್‌ಫೆಂಟ್‌ಜೀಸಿಸ್ ಶಾಲೆಯ ವಿ.ಗಗನ ದ್ವಿತೀಯ, ಎಚ್‌ಟಿಟಿ ಶಾಲೆಯ ಎಂ.ವಿ.ಕಾವೇರಿ ತೃತೀಯ, ಬಿತ್ತಿಪತ್ರ ವಿಭಾಗದಲ್ಲಿ ವಾಸವಿವಿದ್ಯಾಸಂಸ್ಥೆಯ ಜೆ.ಎಸ್.ರಿತೀಶ್‌ದೊರೆ ಪ್ರಥಮ, ಎಚ್‌ಟಿಟಿ ಶಾಲೆಯ ಎನ್.ಶ್ರಾವಣಿ ದ್ವಿತೀಯ, ನಾಯಕನಹಟ್ಟಿ ಎಸ್‌ಟಿಎಸ್ ಶಾಲೆಯ ಎಂ.ವಿ.ಕಾರ್ತಿಕ್ ತೃತೀಯ ಸ್ಥಾನ. ರಸಪ್ರಶ್ನೆ ವಿಭಾಗದಲ್ಲಿ ಎಚ್‌ಟಿಟಿ ಪ್ರೌಢಶಾಲೆ ವಿ.ರುಚಿತ, ಎಸ್.ದೀಕ್ಷಿತ ಪ್ರಥಮ ಸ್ಥಾನ, ಸಿದ್ದೇಶ್ವರನದುರ್ಗ ಪ್ರೌಢಶಾಲೆಯ ಎಸ್.ಎಚ್.ಸುಚಿತ, ಯು. ರಂಗನಾಥ ದ್ವಿತೀಯ, ಪಿ.ಮಹದೇವರಪುರ ಪ್ರೌಢಶಾಲೆಯ ಆರ್.ಅಜಿತ್, ಆರ್.ಧನಂಜಯ ತೃತೀಯಸ್ಥಾನ ಪಡೆದಿದ್ದಾರೆ.

ಕಾರ್ಯಕ್ರಮದಲ್ಲಿ ಪ್ರೌಢಶಾಲೆ ಮುಖ್ಯ ಶಿಕ್ಷಕರ ಸಂಘದ ತಾಲ್ಲೂಕು ಅಧ್ಯಕ್ಷ ಡಿ.ಟಿ.ಶ್ರೀನಿವಾಸ್, ಪ್ರಧಾನ ಕಾರ್ಯದರ್ಶಿ ಡಿ.ಎಸ್.ಪಾಲಯ್ಯ, ಸಹ ಶಿಕ್ಷಕರ ಸಂಘದ ತಾಲ್ಲೂಕು ಅಧ್ಯಕ್ಷ ಬಿ.ರಾಜಕುಮಾರ್, ಮಾರುತಿಭಂಡಾರಿ, ಮೂರ್ತಿ, ಬೋರಯ್ಯ, ಶಿವಮೂರ್ತಿ, ಸುನೀಲ್‌ನಾಯ್ಕ, ಶಿವಣ್ಣ, ಡಿ.ಈರಣ್ಣ, ತಿಪ್ಪೇಸ್ವಾಮಿ, ಜ್ಯೋತಿ ಮುಂತಾದವರು ಉಪಸ್ಥಿತರಿದ್ದರು.




**ಚಳ್ಳಕೆರೆ ನಗರದ ಕ್ಷೇತ್ರಶಿಕ್ಷಣಾಧಿಕಾರಿಗಳ ಕಚೇರಿಯಲ್ಲಿ ಏರ್ಪಡಿಸಿದ್ದ ತಂಬಾಕು ಮುಕ್ತ ಯುವ ಅಭಿಯಾನ ಕಾರ್ಯಕ್ರಮದ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳಿಗೆ ಬಿಇಒ ಕೆ. ಎಸ್.ಸುರೇಶ್ ಪ್ರತಿಜ್ಞಾನವಿಧಿ ಬೋಧಿಸಿದರು. ಜಿಲ್ಲಾ ನೋಡಲ್ ಅಧಿಕಾರಿ ಕೆ.ಜಿ.ಪ್ರಶಾಂತ್, ಡಿ.ಟಿ.ಶ್ರೀನಿವಾಸ್, ಡಿ.ಎಸ್.ಪಾಲಯ್ಯ, ಮಾರುತಿಭಂಡಾರಿ, ಸುನೀಲ್‌ನಾಯ್ಕ ಇದ್ದರು.**

---

## ವಿದ್ಯಾರ್ಥಿಗಳು ತಂಬಾಕು ಸೇರಿದಂತೆ ಮಾದಕ ಚಟಗಳಿಂದ ದೂರವಿದ್ದರೆ ಮಾತ್ರ ಸುಂದರ ಬದುಕು: ತಿಮ್ಮಯ್ಯ



» **ಚಳ್ಳಕೆರೆ**

ನಗರದ ಸರ್ಕಾರಿ ಪದವಿಪೂರ್ವಕಾಲೇಜಿನಲ್ಲಿ ತಂಬಾಕು ಮುಕ್ತ ಯುವ ಅಭಿಯಾನ ಕಾರ್ಯಕ್ರಮವನ್ನು ಬುಧವಾರ ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ತಂಬಾಕಿನ ವಸ್ತುಗಳನ್ನು ಸಂಪೂರ್ಣವಾಗಿ ತ್ಯಜಿಸುವಂತೆ ವಿದ್ಯಾರ್ಥಿಗಳಿಗೆ ಪ್ರತಿಜ್ಞಾನವಿಧಿ ಬೋಧಿಸಲಾಯಿತು.

ಪ್ರಾಚಾರ್ಯ ಕೆ.ತಿಮ್ಮಯ್ಯ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಅಧ್ಯಕ್ಷತೆ ವಹಿಸಿ ಮಾತನಾಡಿ, ಯುವ ಜನಾಂಗ ಮಾದಕ ಚಟಗಳಿಂದ ದೂರವಿರಬೇಕಾಗುತ್ತದೆ. ಪ್ರಾರಂಭದ ಹಂತದಲ್ಲಿ ಯುವಕರಿಗೆ ತಂಬಾಕು ಪದಾರ್ಥಗಳನ್ನು ಉಪಯೋಗಿಸಲು ಹೆಚ್ಚು ಆಸಕ್ತಿ ಉಂಟಾಗುತ್ತದೆ. ಆದರೆ, ಕಾಲಕ್ರಮೇಣ ಅದೇ ತಂಬಾಕು ನಮ್ಮ ಆರೋಗ್ಯ, ಶರೀರವನ್ನು ದುರ್ಬಲಗೊಳಿಸಿ ನಮ್ಮ ಬದುಕನ್ನೇ ಅಸ್ಥಿರಗೊಳಿಸುತ್ತದೆ. ಆದ್ದರಿಂದ ಯುವ ಜನಾಂಗ ದುಶ್ಚಟದಿಂದ ದೂರವಿದ್ದು ಸಮಾಜಕ್ಕೆ ಮಾದರಿಯಾಗಬೇಕು ಎಂದರು. ಹಿರಿಯ ಉಪನ್ಯಾಸಕರಾದ ವಸಂತಕುಮಾರ್, ಎನ್‌ಎಸ್‌ಎಸ್ ಅಧಿಕಾರಿ ಬಿ.ಶಾಂತಕುಮಾರಿ, ಪುಷ್ಪಲತಾ, ಲಲಿತಮ್ಮ, ಕೆ.ವಿ.ಚಂದ್ರಶೇಖರ್, ನಾಗಭೂಷಣ್, ಎಂ.ಶ್ರೀನಿವಾಸ್, ಅಭೀಬುಲ್ಲಾ, ಕುಮಾರಸ್ವಾಮಿ, ಪುಟ್ಟರಂಗಪ್ಪ, ಜಬೀವುಲ್ಲಾ, ನಾಗರಾಜಬೆಳಗಟ್ಟ, ಹೀನಾಕೌಸರ್, ಜಗದೀಶ್, ರವಿಕುಮಾರ್, ಚಂದ್ರಶೇಖರ್ ಮುಂತಾದವರು ಉಪಸ್ಥಿತರಿದ್ದರು.

---

## ಭದ್ರಾ ನಾಲೆಗಳಿಗೆ ನೀರು ಸ್ಥಗಿತ

**ದಾವಣಗೆರೆ:** ಭದ್ರಾ ಯೋಜನೆಯ ಅಚ್ಚುಕಟ್ಟು ಪ್ರದೇಶದ ಮುಂಗಾರು ಹಂಗಾಮಿಗೆ ಜುಲೈ 29 ರಿಂದ ಭದ್ರಾ ಜಲಾಶಯದಿಂದ ನೀರನ್ನು ಹರಿಬಿಡಲಾಗಿರುತ್ತದೆ. ಸತತ 120 ದಿನಗಳವರೆಗೆ ನೀರು ಹರಿಸಿರುವುದರಿಂದ ನವೆಂಬರ್ 26 ರ ರಾತ್ರಿಯಿಂದ ಬಲದಂಡೆ ಮತ್ತು ಎಡದಂಡೆ ನಾಲೆಗಳಲ್ಲಿ ನೀರು ಹರಿಸುವುದನ್ನು ನಿಲ್ಲಿಸಲಾಗುವುದು ಎಂದು ಭದ್ರಾ ಯೋಜನಾ ನೀರಾವರಿ ಸಲಹಾ ಸಮಿತಿಯ ಸದಸ್ಯ ಕಾರ್ಯದರ್ಶಿ ತಿಳಿಸಿದ್ದಾರೆ.

---

## ಪ್ರಮುಖ ಸುದ್ದಿ

# ಆರೋಗ್ಯಕರ ಬೆಳವಣಿಗೆಗೆ ರಂಗಭೂಮಿ ಅಗತ್ಯ: ಸ್ವಾಮೀಜಿ

» **ಚಿತ್ರದುರ್ಗ**



ಆರೋಗ್ಯಕರ ಬೆಳವಣಿಗೆಗೆ ರಂಗಭೂಮಿ ಅಗತ್ಯವಾಗಿದೆ. ಜಾಲತಾಣಗಳ ಅತಿರೇಕಗಳಿಗೆ ಬೇಸತ್ತ ಜನ ಮತ್ತೆ ರಂಗಭೂಮಿಯತ್ತ ವಾಲುತ್ತಿರುವುದು ಸಂತಸ ತಂದಿದೆ. ಸಾಂಸಾರಿಕ ಸಹಬಾಳ್ವೆಗೆ ಹಾಗೂ ಉತ್ತಮ ಬಾಂಧವ್ಯಕ್ಕೆ ರಂಗಭೂಮಿ ಸಹಕಾರಿಯಾಗಿದೆ ಎಂದು ದಾವಣಗೆರೆ ವಿರಕ್ತಮಠದ ಬಸವಪ್ರಭು ಸ್ವಾಮೀಜಿ ಅಭಿಪ್ರಾಯಪಟ್ಟರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು, ಕದಳಿ ವೇದಿಕೆ, ಬಾಪೂಜಿ ಸಮೂಹ ಸಂಸ್ಥೆಗಳು, ರಂಗಸೌರಭ ಕಲಾ ಸಂಘ ಹಾಗೂ ಶ್ರೀ ಶಿವಕುಮಾರ ಕಲಾ ಸಂಘ ಇವರ ಸಂಯುಕ್ತ ಆಶ್ರಯದಲ್ಲಿ ಪಿಳ್ಳೆಕೆರೇನಹಳ್ಳಿಯ ಬಾಪೂಜಿ ವಿದ್ಯಾಸಂಸ್ಥೆಯ ಆವರಣದಲ್ಲಿ ಮಂಗಳವಾರ ಸಂಜೆ 6 ಗಂಟೆಗೆ ಕನ್ನಡ ರಾಜ್ಯೋತ್ಸವ, ಮಕ್ಕಳ ಕಲರವ ಮತ್ತು ಶಿವಸಂಚಾರ ನಾಟಕೋತ್ಸವ 2024 ಕಾರ್ಯಕ್ರಮದ ದಿವ್ಯಸಾನಿಧ್ಯವಹಿಸಿ ಮಾತನಾಡಿದರು.

ಒಂದು ನಾಟಕ ವೀಕ್ಷಿಸಿದರೆ ಹಲವು ಪುಸ್ತಕಗಳನ್ನು ಓದಿದ ಅನುಭವವಾಗುತ್ತದೆ. ನಾಟಕ ನೋಡುವ ಮನಸ್ಸುಗಳು ಹೆಚ್ಚಾಗಬೇಕು. ಉತ್ತಮ ಜೀವನಕ್ರಮವನ್ನು ಕಲ್ಪಿಸುವ ರಂಗಭೂಮಿಯನ್ನು ಪ್ರತಿಯೊಬ್ಬರೂ ಅನುಸರಿಸಬೇಕು ಎಂದರು. ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ನಾಟಕೋತ್ಸವಕ್ಕೆ ಪಾಶ್ಚಾತ್ಯ ಸಂಗೀತವಾದ್ಯ ಜಂಬೆ ನುಡಿಸುವ ಮೂಲಕ ಚಾಲನೆ ನೀಡಿ ಮಾತನಾಡಿದ ಅವರು ಭವಿಷ್ಯದ ಪೀಳಿಗೆಗೆ ಸಾಹಿತ್ಯ, ಸಾಂಸ್ಕೃತಿಕ ಮತ್ತು ನಾಟಕಗಳ ಅಭಿರುಚಿ ಬೆಳೆಸಬೇಕಿದೆ. ಪ್ರೇಕ್ಷಕರು ನಾಟಕಗಳಲ್ಲಿ ಬರುವ ಪಾತ್ರಗಳೊಂದಿಗೆ ಸಮ್ಮಿಳನಗೊಂಡು ಅದರಿಂದ ಜೀವನಮೌಲ್ಯಗಳನ್ನು ತಮ್ಮದಾಗಿಸಿ ಕೊಳ್ಳಬೇಕು. ಆಗ ಮಾತ್ರ ನಾಟಕಗಳಲ್ಲಿ ಬರುವ ವಿಷಯವಸ್ತುವನ್ನು ಗ್ರಹಿಸಲು ಸಾಧ್ಯವಾಗುತ್ತದೆ. ನಾಟಕಗಳು ಪ್ರತಿಯೊಬ್ಬರ ಆಂತರಿಕ ಮನೋಧರ್ಮಗಳನ್ನು ಗಟ್ಟಿಗೊಳಿಸುತ್ತವೆ ಎಂದರು. ಶರಣ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಕೆಎಮ್ ವೀರೇಶ್ ಅಧ್ಯಕ್ಷತೆ ವಹಿಸಿ ಮಾತನಾಡಿ ಚಿತ್ರದುರ್ಗ ನಗರದಲ್ಲಿ ಶಿವಸಂಚಾರ, ನೀನಾಸಂ ಹಾಗೂ ಹವ್ಯಾಸಿ ರಂಗಕರ್ಮಿಗಳ ನಾಟಕಗಳು ನಿರಂತರವಾಗಿ ನಾಟಕಗಳನ್ನು ಪ್ರದರ್ಶಿಸುತ್ತಿವೆ. ರಂಗಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ರಂಗ ಕಲಾವಿದರಿಗೆ ಮತ್ತಷ್ಟು ಉತ್ತೇಜನ ಮತ್ತು ಪ್ರೋತ್ಸಾಹ ನೀಡಬೇಕು. ನಾಟಕ, ಕಲೆ, ಸಾಹಿತ್ಯ ಅಭಿರುಚಿಗಳನ್ನು ಬೆಳೆಸಿಕೊಳ್ಳಬೇಕು ಎಂದರು.


ಇತಿಹಾಸ ಸಂಶೋಧಕ ಡಾ.ಬಿ.ರಾಜಶೇಖರಪ್ಪ, ನಾಟಕಕಾರ ಮತ್ತು ಆರ್ಥಿಕತಜ್ಞ ಡಾ.ಜಿ.ಎನ್. ಮಲ್ಲಿಕಾರ್ಜುನಪ್ಪ, ಬಾಪೂಜಿ ಸಮೂಹ ಸಂಸ್ಥೆಯ ನಿರ್ದೇಶಕ ಕೆಎಮ್ ಚೇತನ್, ಶಸಾಪ ತಾಲ್ಲೂಕಧ್ಯಕ್ಷ ಷಡಾಕ್ಷರಯ್ಯ, ರಂಗನಿರ್ದೇಶಕ ಕೆಪಿಎಮ್ ಗಣೇಶಯ್ಯ, ಕದಳಿ ಮಹಿಳಾ ವೇದಿಕೆ ಜಿಲ್ಲಾಧ್ಯಕ್ಷೆ ಪ್ರೊ. ಎಂ.ಆರ್. ಜಯಲಕ್ಷ್ಮಿ, ಪ್ರ.ಕಾರ್ಯ ದರ್ಶಿ ಶೋಭಾ ಮಲ್ಲಿಕಾರ್ಜುನ್, ಸ.ಕಾರ್ಯ ದರ್ಶಿ ಶೈಲಜಾಬಾಬು, ಗ್ರಾ.ಪಂ ಸದಸ್ಯೆ ಜ್ಯೋತಿ ದೇವೇಂದ್ರಪ್ಪ ಉಪಸ್ಥಿತರಿದ್ದರು.

ದಾವಣಗೆರೆಯ ಸಂಗೀತ ವಿದ್ವಾನ್ ಆನಂದಕುಮಾರ್ ಪಾಟೀಲ್ ಹಿಂದೂಸ್ತಾನಿ ಸಂಗೀತಗಾಯನ ಪ್ರಸ್ತುತಪಡಿಸಿದರು. ನಾಟಕಕಾರ ಬಿ.ಆರ್.ಪೊಲೀಸ್ ಪಾಟೀಲ್ ವಿರಚಿತ ನಾಟಕ ತುಲಾಭಾರ ವಿಶ್ವೇಶ್ವರೀ ಹಿರೇಮಠ ನಿರ್ದೇಶನದಲ್ಲಿ ಸಾಣೇಹಳ್ಳಿ ಶಿವಸಂಚಾರದ ಕಲಾವಿದರು ಮನೋಜ್ಞವಾಗಿ ಅಭಿನಯಿಸಿದರು.

ಚಿತ್ರದುರ್ಗ ಜಿಲ್ಲೆಯ ನಾಗರಿಕರು, ರಂಗಾಸಕ್ತರು, ಜಿಲ್ಲಾಮಟ್ಟದ ಅಧಿಕಾರಿಗಳು, ವಿದ್ಯಾರ್ಥಿಗಳು, ಉಪನ್ಯಾಸಕರು, ಕಲಾವಿದರು, ಸಾಹಿತಿಗಳು ಸೇರಿದಂತೆ ಸಾವಿರಕ್ಕೂ ಹೆಚ್ಚು ಜನ ನಾಟಕವನ್ನು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.

## ಫಾಸ್ಟ್ ನ್ಯೂಸ್

### ಮೈಲನಹಳ್ಳಿಯಲ್ಲಿ ಇಂದು ಮಹರ್ಷಿ ವಾಲ್ಮೀಕಿ ಪ್ರತಿಮೆ ಅನಾವರಣ: ಶಾಸಕರು ಸೇರಿದಂತೆ ಹಲವಾರು ಗಣ್ಯರು ಬಾಗಿ




» **ಚಳ್ಳಕೆರೆ**

ತಾಲ್ಲೂಕಿನ ತಳಕು ಹೋಬಳಿಯ ಮೈಲನಹಳ್ಳಿ ಗ್ರಾಮದಲ್ಲಿ ನ.21ರ ಗುರುವಾರ ಖಾಸಗಿ ಬಸ್ ನಿಲ್ದಾಣದಲ್ಲಿ ಮಹರ್ಷಿ ಶ್ರೀವಾಲ್ಮೀಕಿ ಅಮೃತಶಿಲೆಯ ಪ್ರತಿಮೆಯನ್ನು ಅನಾವರಣ ಮಾಡಲಾಗುವುದು ಎಂದು ಗ್ರಾಮ ಪಂಚಾಯಿತಿ ಅಧ್ಯಕ್ಷ ಜೆ.ಜಗನ್ನಾಥ ತಿಳಿಸಿದ್ದಾರೆ. ಅವರು, ಈ ಬಗ್ಗೆ ಮಾಹಿತಿ ನೀಡಿ, ಕೋಲಾರ ಜಿಲ್ಲೆಯ ಮಾಲೂರಿನ ಶಿವಾರಪೇಟೆಯ ಪ್ರಖ್ಯಾತ ಶಿಲ್ಪಿ ಮುನಿರಾಜು ಸುಮಾರು 1.80 ಲಕ್ಷ ವೆಚ್ಚದಲ್ಲಿ ಮಹರ್ಷಿ ಶ್ರೀವಾಲ್ಮೀಕಿಯವರ ಅಮೃತಶಿಲೆಯ ಮೂರ್ತಿಯನ್ನು ಭವ್ಯವಾಗಿ ಕೆತ್ತನೆ ಮಾಡಿದ್ದು, ಈಗಾಗಲೇ ಮೂರ್ತಿ ಪ್ರತಿಷ್ಠಾಪನೆಗೆ ಸಿದ್ದತೆಗಳನ್ನು ಪೂರ್ಣಗೊಳಿಸಲಾಗಿದೆ. ಕಾರ್ಯಕ್ರಮದಲ್ಲಿ ಕ್ಷೇತ್ರದ ಶಾಸಕ ಎನ್.ವೈ.ಗೋಪಾಲಕೃಷ್ಣ, ಸಂಸದ ಗೋವಿಂದ ಎಂ.ಕಾರಜೋಳ, ರಾಜನಹಳ್ಳಿ ವಾಲ್ಮೀಕಿ ಗುರುಪೀಠದ ಪ್ರಸನ್ನಾನಂದಪುರಿ ಮಹಾಸ್ವಾಮೀಜಿ ದಿವ್ಯಸಾನಿಧ್ಯ ವಹಿಸುವರು. ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ, ಶಾಸಕ ಟಿ.ರಘುಮೂರ್ತಿ, ಚಿತ್ರದುರ್ಗ ಶಾಸಕ ವೀರೇಂದ್ರಪಪ್ಪಿ, ಗೋವಿಂದಪ್ಪ, ಚಂದ್ರಪ್ಪ, ದ್ರಾಕ್ಷಿವೈನ್ ಮಂಡಳಿ ಅಧ್ಯಕ್ಷಡಾ.ಯೋಗೇಶ್‌ಬಾಬು, ಕರಿಯಪ್ಪಮಾಳಿಗೆ, ಸದಸ್ಯರಾದ ಶಾಂತಮ್ಮ, ಎಸ್.ಜಯಲಕ್ಷ್ಮಿ, ವೆಂಕಟೇಶ್, ಪಿಡಿಒ ಎಂ.ನಾಗರಾಜ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸುವರು.

### ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆ

» **ದಾವಣಗೆರೆ**

ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ ವತಿಯಿಂದ ನವಂಬರ್ 22 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಪ್ರಗತಿಪರಿಶೀಲನಾ ಸಮಿತಿ ಸಭೆಯನ್ನು ಆಯೋಜಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆಯ ಉಪನಿರ್ದೇಶಕರು ಹಾಗೂ ಜಿಲ್ಲಾ ಮಟ್ಟದ ಪರಿಶೀಲನಾ ಸಮಿತಿಯ ಸದಸ್ಯ ಕಾರ್ಯದರ್ಶಿ ರಾಜಾನಾಯ್ಕ ತಿಳಿಸಿದ್ದಾರೆ.

### ಜಿಲ್ಲಾ ಮಟ್ಟದ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ

» **ದಾವಣಗೆರೆ**

ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಅಡಿಯಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನವಂಬರ್ 22 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಸಮನ್ವಯ ಸಮಿತಿ ಸಭೆಯನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ನೋಡೆಲ್ ಅಧಿಕಾರಿ ಹಾಗೂ ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್ ತಿಳಿಸಿದ್ದಾರೆ.

### ಜಗಳೂರು ವಾರ್ಡ್೯ಕ್ಕೆ ಉಪ ಚುನಾವಣೆ

» **ದಾವಣಗೆರೆ**

ಜಗಳೂರು ಪಟ್ಟಣ ಪಂಚಾಯಿತಿ ವ್ಯಾಪ್ತಿಯ ವಾರ್ಡ್ 9 ಕ್ಕೆ ಉಪಚುನಾವಣೆ ನಡೆಯುತ್ತಿದ್ದು ನವಂಬರ್ 23 ರಂದು ಮತದಾನ ನಡೆಯಲಿದೆ. ಈ ವ್ಯಾಪ್ತಿಯಲ್ಲಿ ನ.23 ರಂದು ನಡೆಯುವ ಸಂತೆ, ಜಾತ್ರೆಯನ್ನು ನಿಷೇಧಿಸಿ ಜಿಲ್ಲಾ ದಂಡಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ಆದೇಶಿಸಿರುತ್ತಾರೆ.

### ನ.21ಕ್ಕೆ ಸಾಮಾನ್ಯ ಸಭೆ

» **ದಾವಣಗೆರೆ**

ಮಹಾ ನಗರಪಾಲಿಕೆಯ ಮಹಾಪೌರರಾದ ಚಮನ್ ಸಾಬ್.ಕೆ ಅವರ ಅಧ್ಯಕ್ಷತೆಯಲ್ಲಿ ನವಂಬರ್ 21 ರಂದು ಬೆಳಿಗ್ಗೆ 11 ಗಂಟೆಗೆ ಪಾಲಿಕೆಯ ಸಭಾಂಗಣದಲ್ಲಿ ಸಾಮಾನ್ಯ ಸಭೆಯನ್ನು ಆಯೋಜಿಸಲಾಗಿದೆ ಎಂದು ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

# ದಾವಣಗೆರೆ: ಮಹಿಳೆ, ಮಕ್ಕಳ ಆಸ್ಪತ್ರೆ ಲೋಕಾರ್ಪಣೆ

**ಮಧ್ಯ ಕರ್ನಾಟಕದ ಜನರ ಆರೋಗ್ಯ ಕಾಪಾಡಲು ಚಿಗಟೇರಿ ಆಸ್ಪತ್ರೆ ಮರುಸ್ಥಾಪನೆಗೆ ಮಾಸ್ಟರ್ ಪ್ಲಾನ್, ಗ್ರೂಪ್ ಡಿ ಹುದ್ದೆಗಳಿಗೆ ನೇರಪಾವತಿಯಡಿ ನೇಮಕಕ್ಕೆ ಕಾನೂನು ಇಲಾಖೆಗೆ ಪ್ರಸ್ತಾವನೆ; ಆರೋಗ್ಯ ಸಚಿವರಾದ ದಿನೇಶ್ ಗುಂಡೂರಾವ್**

» **ದಾವಣಗೆರೆ**





ಸರ್ಕಾರಿ ಆಸ್ಪತ್ರೆಗಳಲ್ಲಿ ನಾನ್ ಕ್ಲಿನಿಕಲ್ ವಿಭಾಗದಲ್ಲಿಗ್ರೂಪ್ ಡಿ ಸೇವೆಮಾಡುತ್ತಿರುವ ಹೊರಗುತ್ತಿಗೆ ಸಿಬ್ಬಂದಿಗಳನ್ನು ನೇರ ಪಾವತಿಯಡಿ ನೇಮಕ ಮಾಡಿಕೊಳ್ಳಲು ಕಾನೂನು ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿದ್ದು ಸಾಧಕ, ಬಾದಕಗಳ ಪರಿಶೀಲನೆ ನಂತರ ಹೊರಗುತ್ತಿಗೆಯ ಎಲ್ಲಾ ಗ್ರೂಪ್ ಡಿ ಸಿಬ್ಬಂದಿಗಳನ್ನು ನೇರಪಾವತಿಯಡಿ ಪಡೆದುಕೊಳ್ಳಲಾಗುತ್ತದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ದಿನೇಶ್ ಗುಂಡೂರಾವ್ ತಿಳಿಸಿದರು.

ಅವರು ಬುಧವಾರ ಚಿಗಟೇರಿ ಆಸ್ಪತ್ರೆ ಆವರಣದಲ್ಲಿ ನಿರ್ಮಾಣ ಮಾಡಿರುವ 200 ಹಾಸಿಗೆಯ ಮಹಿಳೆ ಮತ್ತು ಮಕ್ಕಳ ಆಸ್ಪತ್ರೆ, ಟ್ರಾಮಾ ಕೇರ್ ಸೆಂಟರ್‌ನ್ನು ಲೋಕಾರ್ಪಣೆ ಮಾಡಿ ಸಮಾರಂಭದಲ್ಲಿ ಮಾತನಾಡಿದರು. ದಾವಣಗೆರೆಯಲ್ಲಿನ ಚಿಗಟೇರಿ ಆಸ್ಪತ್ರೆ ವಿಶಾಲವಾದ ಸ್ಥಳದಲ್ಲಿದ್ದು 70 ವರ್ಷದ ಹಳೆಯದಾಗಿದೆ. ಇಲ್ಲಿ ಹೊಸ ಕಟ್ಟಡ, ದುರಸ್ಥಿಯಾಗಬೇಕಾಗಿದ್ದು ಮಧ್ಯ ಕರ್ನಾಟಕದಲ್ಲಿನ ಈ ಆಸ್ಪತ್ರೆಯನ್ನು ಸುಸಜ್ಜಿತವಾಗಿ ನಿರ್ಮಾಣ ಮಾಡುವ ಮೂಲಕ ಈ ಭಾಗದಲ್ಲಿನ ಜನರಿಗೆ ಉತ್ತಮ ಆರೋಗ್ಯ ಸೌಲಭ್ಯ ಒದಗಿಸುವ ಗುರಿ ಹೊಂದಲಾಗಿದೆ. ಇದಕ್ಕಾಗಿಯೇ ಇಲ್ಲಿನ ಮೂಲಭೂತ ಸೌಕರ್ಯಕ್ಕೆ ಮತ್ತು ಹೊಸ ಬ್ಲಾಕ್ ನಿರ್ಮಾಣಕ್ಕೆ ರೂ.17 ಕೋಟಿ ಬಿಡುಗಡೆ ಮಾಡಲಾಗಿದ್ದು ಭವಿಷ್ಯದ ದೃಷ್ಠಿಯಿಂದ ನೂತನ ಯೋಜನೆಯನ್ನು ಸಿದ್ದಪಡಿಸಿ ಅದರಂತೆ ಹೊಸ ಕಟ್ಟಡಗಳನ್ನು ನಿರ್ಮಾಣ ಮಾಡಲಾಗುತ್ತದೆ ಎಂದರು.

ರೂ. 30 ಕೋಟಿಯಲ್ಲಿ ನಿರ್ಮಿಸಲಾದ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ 200 ಹಾಸಿಗೆ ಸಾಮರ್ಥ್ಯವಿದ್ದು ಇಲ್ಲಿಗೆ ಅಗತ್ಯವಿರುವ ಸಿಬ್ಬಂದಿಗಳನ್ನು ಮಂಜೂರು ಮಾಡಲು ಸರ್ಕಾರದ ಮುಂದೆ ಪ್ರಸ್ತಾವನೆ ಇದ್ದು ಇಲ್ಲಿಗೆ ಬೇಕಾಗಿರುವ ವೈದ್ಯರು ಹಾಗೂ ಸಿಬ್ಬಂದಿಗಳ ಹುದ್ದೆಗಳಿಗೆ ಮಂಜೂರಾತಿಯನ್ನು ನೀಡಲಾಗುತ್ತದೆ. ಟ್ರಾಮಾ ಕೇರ್ ಸೆಂಟರ್‌ಗೂ ಸಿಬ್ಬಂದಿಗಳ ಅಗತ್ಯವಿದ್ದು ಪರಿಶೀಲಿಸಿ ಮಂಜೂರಾತಿ ನೀಡಲಾಗುತ್ತದೆ. ಆಸ್ಪತ್ರೆ ಕಟ್ಟಿದರೆ ಸಾಲದು, ಇಲ್ಲಿ ಅಗತ್ಯವಿರುವ ಪರಿಕರ, ಸಿಬ್ಬಂದಿಗಳು ಇದ್ದಾಗ ಮಾತ್ರ ಜನರಿಗೆ ಆರೋಗ್ಯ ಸೇವೆ ಸಿಗಲು ಸಾಧ್ಯವಿದೆ ಎಂದರು.

ಆರೋಗ್ಯ ಮತ್ತು ಶಿಕ್ಷಣ ಇಲಾಖೆಗಳು ಮಾನವ ಸಂಪನ್ಮೂಲ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರವಹಿಸಲಿವೆ. ಆದರೆ ಇವುಗಳಿಗೆ ಸಿಗಬೇಕಾದ ಆದ್ಯತೆ ಸಾಕಾಗುತ್ತಿಲ್ಲ. ಜನರ ಆರೋಗ್ಯ ಸಂರಕ್ಷಣೆ ಮಾಡಿದಾಗ ಆರೋಗ್ಯವಂತ ನಾಗರಿಕನಾಗಲು ಸಾಧ್ಯ, ಅನಾರೋಗ್ಯಕ್ಕೆ ತುತ್ತಾಗಿ ಚಿಕಿತ್ಸೆಗಾಗಿ ಆರ್ಥಿಕ ನಷ್ಟವನ್ನು ಅನುಭವಿಸಬೇಕಾಗುತ್ತದೆ. ಆರೋಗ್ಯವು ಗ್ಯಾರಂಟಿ ಯೋಜನೆಯಾಗಬೇಕು, ಆರೋಗ್ಯವಂತ ಸಮಾಜ ನಿರ್ಮಾಣ ಮಾಡಲು ಶಿಕ್ಷಣ ಮತ್ತು ಆರೋಗ್ಯಕ್ಕೆ ಹೆಚ್ಚಿನ ಆದ್ಯತೆ ಸಿಗಬೇಕಾಗಿದೆ ಎಂದರು.

ಮಾಯಕೊಂಡ ಪ್ರತ್ಯೇಕ ವಿಧಾನಸಭಾ ಕ್ಷೇತ್ರವಾಗಿದ್ದರೂ ಸಮುದಾಯ ಆರೋಗ್ಯ ಕೇಂದ್ರವಿರುವುದಿಲ್ಲ. ಮುಂದಿನ ದಿನಗಳಲ್ಲಿ ಮಾಯಕೊಂಡಕ್ಕೆ ಸಮುದಾಯ ಆರೋಗ್ಯ ಕೇಂದ್ರವನ್ನು ಮಂಜೂರು ಮಾಡಲಾಗುತ್ತದೆ.ಮೂಲಭೂತಸೌಕರ್ಯ ಕೊಟ್ಟರೆ ಸಾಕಾಗುವುದಿಲ್ಲ, ವೈದ್ಯರು ಜನರ ಸೇವೆ ಮಾಡಬೇಕು. ವೈದ್ಯಕೀಯ ಸೇವಾ ಕ್ಷೇತ್ರವಾಗಿದ್ದು ಸಹಾನುಭೂತಿಯಿಂದ ಎಲ್ಲಾ ವೈದ್ಯರು ಕೆಲಸ ಮಾಡುವುದು ಬಹಳ ಮುಖ್ಯವಾಗಿರುತ್ತದೆ. ಈ ನಿಟ್ಟಿನಲ್ಲಿ ಎಲ್ಲಾ ವೈದ್ಯರು, ಸಿಬ್ಬಂದಿಗಳ ಸೇವೆ ಜನರಿಗೆ ಸಿಗುವಂತಾಗಬೇಕೆಂದರು.

ಶಾಸಕರಾದ ಡಾ; ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸಿ ಮಾತನಾಡಿ ಆಸ್ಪತ್ರೆ ಕಟ್ಟಡದ ಜೊತೆಗೆ ಸಲಕರಣೆಗಳು ಇರಬೇಕಾಗುತ್ತದೆ, ಜೊತೆಗೆ ಸಿಬ್ಬಂದಿಗಳು ಇರಬೇಕು, ಇಲ್ಲವಾದಲ್ಲಿ ವ್ಯರ್ಥವಾಗುತ್ತದೆ. ಚಿಗಟೇರಿ ಆಸ್ಪತ್ರೆಯಿಂದ ಸಾಕಷ್ಟು ಬಡ ಜನರಿಗೆ ಅನುಕೂಲವಾಗಿದೆ. ಇಲ್ಲಿ ಇನ್ನೂ ಹೆಚ್ಚಿನ ಸೌಲಭ್ಯಗಳು ಜನರಿಗೆ ಸಿಗುವಂತಾಗಬೇಕು. ಇಲ್ಲಿ ನರ್ಸ್, ಆಯಾಗಳ ಕೊರತೆ ಇದೆ ಎಂದು ತಿಳಿದುಬಂದಿದ್ದು ವ್ಯವಸ್ಥೆ ಸರಿಪಡಿಸಬೇಕು. ಹೊರಗುತ್ತಿಗೆಯಲ್ಲಿ ಮಧ್ಯವರ್ತಿಗಳ ಹಾವಳಿ ತಪ್ಪಿಸಿ ನೇರಪವಾತಿಯಡಿ ಆಸ್ಪತ್ರೆ ಹೊರಗುತ್ತಿಗೆ ಸಿಬ್ಬಂದಿಗಳನ್ನು ಪಡೆಯುವಂತಾಗಬೇಕು. ಸಾರ್ವಜನಿಕ ಸೇವೆ ಮಾಡುವಾಗ ಬಹಳ ಪಾರದರ್ಶಕವಾಗಿ ಕೆಲಸ ಮಾಡಬೇಕಾಗುತ್ತದೆ. ಕೋವಿಡ್ ಸಂದರ್ಭದಲ್ಲಿ ಜನರ ಆರೋಗ್ಯ ರಕ್ಷಣೆಗಾಗಿ ಖಾಸಗಿಯಾಗಿ 8 ಕೋಟಿವರೆಗೆ ವೆಚ್ಚ ಮಾಡಲಾಗಿದೆ ಎಂದರು.

ದಾವಣಗೆರೆ ಸಂಸದರಾದ ಡಾ; ಪ್ರಭಾ ಮಲ್ಲಿಕಾರ್ಜುನ್ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿ ವಿದ್ಯಾರ್ಥಿಯಾಗಿದ್ದ ಸಮಯದಿಂದಲೂ ಚಿಗಟೇರಿ ಆಸ್ಪತ್ರೆಯ ಸ್ಥಿತಿಗತಿ ಗೊತ್ತಿದೆ. ಇಲ್ಲಿ ಸಾಕಷ್ಟು ಮೂಲಭೂತ ಸೌಕರ್ಯಗಳ ಜೊತೆಗೆ ಸುಧಾರಣೆಯಾಗಬೇಕಿದೆ. ಮಾಸ್ಟರ್ ಪ್ಲಾನ್ ತಯಾರಿಸುವ ಮೂಲಕ ಹಂತ ಹಂತವಾಗಿ ಸುಧಾರಣಾ ಕ್ರಮ ಕೈಗೊಳ್ಳಲಾಗುತ್ತದೆ. ಮುಂದಿನ ದಿನಗಳಲ್ಲಿ ಮಾನವ ಹಾಲು ಬ್ಯಾಂಕ್ ಸ್ಥಾಪನೆ ಮಾಡುವ ಮೂಲಕ ಇನ್ನಷ್ಟು ಅನುಕೂಲ ಕಲ್ಪಿಸುವ ಉದ್ದೇಶ ಹೊಂದಲಾಗಿದೆ ಎಂದರು.

ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ ಮುಖ್ಯ ಅತಿಥಿಗಳಾಗಿ ಮಾತನಾಡಿ ಮಹಿಳೆ ಮತ್ತು ಮಕ್ಕಳ ಆಸ್ಪತ್ರೆ ಉದ್ಘಾಟನೆಯಾಗಿದೆ, ಇದಕ್ಕೆ ಮಾನವ ಸಂಪನ್ಮೂಲ ಕಲ್ಪಿಸಬೇಕು. ಸಿಬ್ಬಂದಿಗಳು ಸಹಉಪಕರಣಗಳನ್ನುನಿಷ್ಕ್ರಿಯೆಗೊಳಿಸದೇ ಉಪಯುಕ್ತ ಮಾಡಿಕೊಳ್ಳಬೇಕು. ಐಸಿಯು ಬೆಡ್ ಸಂಖ್ಯೆಯನ್ನು ಇನ್ನಷ್ಟು ಹೆಚ್ಚಿಸಬೇಕು. ಶವಗಾರಕ್ಕೆ ಕಾಯಕಲ್ಪ ಮಾಡಬೇಕಾಗಿದ್ದು ಅತ್ಯುತ್ತಮವಾಗಿ ಕೆಲಸ ಮಾಡುವ ಡಾ; ಮೋಹನ್ ರವರನ್ನು ಸನ್ಮಾನಿಸಿ ಗೌರವಿಸಬೇಕೆಂದರು.

ಕಾರ್ಯಕ್ರಮದಲ್ಲಿ ಮೇಯರ್ ಕೆ.ಚಮನ್‌ಸಾಬ್, ದೂಡಾ ಆಧ್ಯಕ್ಷ ಕೆ.ದಿನೇಶ್ ಶೆಟ್ಟಿ, ಉಪ ಮೇಯರ್ ಸೋಗಿ ಶಾಂತಕುಮಾರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆಯುಕ್ತರಾದ ಶಿವಕುಮಾರ್ ಕೆ.ಬಿ, ಅಭಿಯಾನ ನಿರ್ದೇಶಕರಾದ ಡಾ; ನವೀನ್ ಭಟ್ ರೈ, ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ; ಷಣ್ಮುಖಪ್ಪ ಹಾಗೂ ಇನ್ನಿತರೆ ಗಣ್ಯರು ಉಪಸ್ಥಿತರಿದ್ದರು.

ಜಿಲ್ಲಾ ಸರ್ಜನ್ ಡಾ; ನಾಗೇಂದ್ರಪ್ಪ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.

## ಮನನೊಂದು ತಾಯಿ, ಮಗಳು ನೇಣಿಗೆ ಶರಣು

» **ಹೊಳಲ್ಕೆರೆ**

ಜೀವನದಲ್ಲಿ ಜಿಗುಪ್ಸೆಗೊಂಡು ತಾಯಿ, ಮಗಳು ಆತ್ಮಹತ್ಯೆ ಮಾಡಿಕೊಂಡ ಘಟನೆ ತಾಲೂಕಿನ ಚಿಕ್ಕಂದವಾಡಿ ಗ್ರಾಮದಲ್ಲಿ ಮಂಗಳವಾರ ನಡೆದಿದೆ. ಗ್ರಾಮದ (55), ಲಾವಣ್ಯ(17)ಮೃತರು. ಆರು ತಿಂಗಳ ಹಿಂದೆ ಮನೆಯ ಯಜಮಾನ ಹೃದಯಾಘಾತ ದಿಂದ ಮೃತರಾಗಿದ್ದರು.

ಗಂಡ, ಹೆಂಡತಿ, ಮಗಳು ಮೂರು ಜನರ ಚಿಕ್ಕ ಕುಟುಂಬ ವಾಗಿತ್ತು. ಕಷ್ಟಪಟ್ಟು ದುಡಿದು ಉಣ್ಣುವ ಮನಸ್ಸು ಅವರದ್ದು, ವಿಧಿ ಆಟವೇನೋ ಆರು ತಿಂಗಳ ಹಿಂದೆ ಮನೆಯ ಯಜಮಾನನಿಗೆ ಹೃದಯಾಘಾತವಾಗಿ ಮರಣ ಹೊಂದಿದರು. ಅಂದಿನಿಂದ ಆ ಕುಟುಂಬದಲ್ಲಿ ಕತ್ತಲೆ ಕಾರ್ಮೋಡ ಕವಿಯಲಾರಂಭಿಸಿತು. ಪತಿ ತೀರಿಕೊಂಡಿದ್ದೆ ಒಂದು ನೆಪವಾಯೇನೋ. ಪತಿ ಬಸವರಾಜಪ್ಪ ನಿಧನರಾದ ಪತ್ನಿ–ಮಗಳು ಖಿನ್ನತೆಗೆ ದಿನದಿಂದಲೂ ಒಳಗಾಗಿದ್ದರು. ಅಂದಿನಿಂದಲೂ ಯಾರೊಂದಿಗೂ ಬೆರೆಯುತ್ತಿರಲಿಲ್ಲ.ಕಳೆದ ಎಂಟತ್ತು ದಿನಗಳಿಂದ ಸಂಬಂಧಿಕರು ಫೋನ್ ಮಾಡಿದರೆ ಸ್ವಿಚ್ ಆಫ್ ಬರುತ್ತಿತ್ತು. ಪಕ್ಕದ ಮನೆಗೆ ಫೋನ್ ಮಾಡಿ ಕೇಳಿದಾಗ ಹಲವು ದಿನಗಳಿಂದ ಮನೆ ಬೀಗ ಹಾಕಿರುವುದಾಗಿ ತಿಳಿಸಿದ್ದಾರೆ. ಪುಷ್ಪ ವಾಸವಿದ್ದ ಮನೆಯ ಅಕ್ಕಪಕ್ಕ ಯಾವುದೇ ಮನೆಗಳು ಇರಲಿಲ್ಲ. ಓಡಾಡುವ ಜನರು ಮನೆ ಬೀಗ ಹಾಕಿರುವುದನ್ನು ಕಂಡು ಯಾವುದೋ ಊರಿಗೆ ಹೋಗಿರಬಹುದು ಎಂದು ಭಾವಿಸಿದ್ದಾರೆ. ಪುಷ್ಪ ಅವರ ಸಂಬಂಧಿ ಆಡನೂರು ನರೇಶ್ ಗ್ರಾಮದ ಪರಿಚಯಸ್ಥರಿಗೆ ಫೋನ್ ಮಾಡಿ ವಿಚಾರಿಸಿದ್ದಾರೆ. ಅವರು ಮನೆಯಬಳಿ ಹೋದಾಗ ಬೀಗ ಹಾಕಿದೆ, ಆದರೆ ಮನೆಯಿಂದ ಏನೋ ವಾಸನೆ ಬರುತ್ತಿದೆ ಎಂದು ತಿಳಿಸಿದ್ದಾರೆ.

> ಲಾವಣ್ಯ ತುಂಬಾ ಒಳ್ಳೆಯ ಹುಡುಗಿ, ವಿದ್ಯಾವಂತೆ, ವಿಷಯ ತಿಳಿದು ನೋವಾಯಿತು. ದೀಪಾವಳಿ ಹಬ್ಬಕ್ಕೆ ಕಾಲೇಜಿಗೆ ರಜೆ ನೀಡಿದಾಗಿನಿಂದ ಲಾವಣ್ಯ ಕಾಲೇಜಿಗೆ ಬಂದಿರಲಿಲ್ಲ. ಸ್ನೇಹಿತೆಯರನ್ನು ವಿಚಾರಿಸಿದಾಗ ಮನೆ ಬೀಗ ಹಾಕಿದೆ, ಊರಿಗೆ ಹೋಗಿರಬಹುದು ಎಂದು ತಿಳಿಸಿದ್ದರು.
>
> » **ಎಚ್.ರಾಜು ಪ್ರಾಚಾರ್ಯ ಎಸ್‌ಜೆಎಂ ಪಿಯು ಕಾಲೇಜು, ಚಿಕ್ಕಜಾಜೂರು.**

ಕೂಡಲೇ ಸಂಬಂಧಿಕರು ಮಂಗಳವಾರ ಆಗಮಿಸಿ ಬಾಗಿಲು ಮುರಿದು ನೋಡಿದಾಗ ತಾಯಿ, ಮಗಳು ಇಬ್ಬರೂ ನೇಣಿಗೆ ಶರಣಾಗಿರುವುದು ಕಂಡು ಬಂದಿದೆ. ನೇಣು ಬಿಗಿದುಕೊಂಡು ಹಲವು ದಿನಗಳಾಗಿರುವ ಕಾರಣ ಹಗ್ಗದಲ್ಲಿ ತಲೆ ಮಾತ್ರ ಇದ್ದು, ದೇಹಗಳು ನೆಲಕ್ಕೆ ಬಿದ್ದಿರುವುದಾಗಿ ತಿಳಿದು ಬಂದಿದೆ.

**ಸಮೃದ್ಧ ಅಡಕೆ ತೋಟ:** ಬಸವರಾಜಪ್ಪ ತನ್ನ ಒಬ್ಬಳೇ ಮಗಳ ಭವಿಷ್ಯ ರೂಪಿಸುವ ಉದ್ದೇಶದಿಂದ ಕಷ್ಟಪಟ್ಟು ನಾಲ್ಕು ಎಕರೆ ಅಡಕೆ ತೋಟ ಮಾಡಿದ್ದರು. ಅದು ಈಗಾಗಲೇ ಫಲ ಕೊಡುವ ಹಂತದಲ್ಲಿದೆ. ಮಗಳು ಲಾವಣ್ಯ ಚಿಕ್ಕಜಾಜೂರಿನ ಎಸ್‌ಜೆಎಂ ಕಾಲೇಜಿನಲ್ಲಿ ಪ್ರಥಮ ಪಿಯುಸಿ ಓದುತ್ತಿದ್ದಳು. ಇಡೀ ಶಾಲೆಯೇ ಮೌನಕ್ಕೆ ಶರಣಾಗಿದೆ. ಶಿಕ್ಷಕರ, ಸ್ನೇಹಿತರ ಕಣ್ಣುಗಳು ತುಂಬಿಕೊಂಡಿದ್ದವು. ಇನ್ನು ಮನೆಯಲ್ಲಿ ಯಾರು ಇಲ್ಲದ ಕಾರಣ ಮನೆ ಬಣಗುಡುತ್ತಿದೆ. ಮೂವರು ಅಗಲಿದ ಕಾರಣ ಸಂಬಂಧಿಕರು, ಸ್ನೇಹಿತರ ಆಕ್ರಂದನ ಮುಗಿಲು ಮುಟ್ಟಿತ್ತು. ಪಿಎಸ್‌ಐ ನೇತ್ರಾವತಿ ಹಾಗೂ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಚಿಕ್ಕಜಾಜೂರು ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

## ಬಿಜೆಪಿ ಸದಸ್ಯತ್ವ ನೋಂದಣಿಗೆ ನ.25 ರವರೆಗೆ ಕಾಲಾವಕಾಶ; ದತ್ತಾತ್ರೇಯ




**ಚಿತ್ರದುರ್ಗ:** ನಗರದ ಭಾರತೀಯ ಜನತಾ ಪಾರ್ಟಿಯ ಕಚೇರಿಯಲ್ಲಿ ಬುಧವಾರ ಚಿತ್ರದುರ್ಗ ವಿಧಾನಸಭಾ ಕ್ಷೇತ್ರದ ಬಿಜೆಪಿ ಸದಸ್ಯತ್ವ ಅಭಿಯಾನ ಪರಿಶೀಲನಾ ಕಾರ್ಯ ನಡೆಯಿತು.ಅಭಿಯಾನದ ಉಸ್ತುವಾರಿ ದತ್ತಾತ್ರೇಯ ಭಾಗವಹಿಸಿ, ಚಿತ್ರದುರ್ಗ ವಿಧಾನಸಭಾ ಕ್ಷೇತ್ರದ ಪ್ರತಿಯೊಂದು ಬೂತ್‌ನಲ್ಲಿಯೂ ಸಹಾ ಕನಿಷ್ಠ ಮೂರು ಜನ ಸಕ್ರಿಯ ಸದಸ್ಯರಾಗಬೇಕಿದೆ. ಇದಕ್ಕೆ ಪ್ರತಿಯೊಂದು ಬೂತ್‌ನಲ್ಲಿಯೂ 50 ಜನರನ್ನು ಪಕ್ಷದ ಸದಸ್ಯರನ್ನಾಗಿ ಮಾಡಬೇಕಿದೆ. ಈಗಾಗಲೇ ಹಲವು ಬೂತ್‌ಗಳಲ್ಲಿ ಮಾಡಲಾಗಿದೆ ಇನ್ನು ಮಾಡಲಾಗದವರು ನ. 25ರವರೆಗೆ ಕಾಲಾವಕಾಶ ಇದೆ ಈ ಸಮಯದಲ್ಲಿ ಸದಸ್ಯತ್ವವನ್ನು ಮಾಡುವಂತೆ ಕಾರ್ಯಕರ್ತರಿಗೆ ಕರೆ ನೀಡಿದರು.ಈ ರೀತಿಯಾಗಿ ಸಕ್ರಿಯ ಸದಸ್ಯರನ್ನಾಗಿ ಮಾಡುವುದರಿಂದ ಮುಂದೆ ಬರುವಂತ ಜಿಲ್ಲಾ ಮತ್ತು ತಾ.ಪಂ.ಗಳ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗಳಾಗಲು ಅವಕಾಶ ಇದೆ, ಇದ್ದಲ್ಲದೆ ಪಕ್ಷದ ಒಳಗಡೆಯೂ ಸಹಾ ವಿವಿಧ ರೀತಿಯ ಹುದ್ದೆಗಳನ್ನು ಪಡೆಯಲು ಸಹಾ ಸಹಕಾರಿಯಾಗಲಿದೆ ಇದರಿಂದ ಸದಸ್ಯತ್ವಕ್ಕೆ ಹೆಚ್ಚಿನ ಮಹತ್ವವನ್ನು ನೀಡಬೇಕಿದೆ ಇದ್ದಲ್ಲದೆ ಪ್ರಪಂಚದಲ್ಲಿಯೇ ನಮ್ಮ ಪಕ್ಷದವತಿಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಸದಸ್ಯತ್ವಮಾಡುವ ಉದ್ದೇಶ ಪಕ್ಷದ ಮುಖಂಡರು ಹೊಂದಿದ್ದಾರೆ ಇದಕ್ಕೆ ನಾವೆಲ್ಲರು ಸಾಥ್ ನೀಡಬೇಕಿದೆ ಎಂದರು.

**ಪ್ರಮುಖ ಸುದ್ದಿ**

# ಎಲ್ಲರ ಮನಸ್ಸನ್ನು ಅರಳಿಸುವ ಶಕ್ತಿ ಸಂಗೀತಕ್ಕಿದೆ; ಓಬಳೇಶ್

» **ಚಿತ್ರದುರ್ಗ**



ನಗರದ ತರಾಸು ರಂಗಮಂದಿರದಲ್ಲಿ ಮದಕರಿನಾಯಕ ಸಾಂಸ್ಕೃತಿಕ ಕೇಂದ್ರ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಸಂಗೀತೋತ್ಸವ ಕಾರ್ಯಕ್ರಮ ನಡೆಯಿತು.

ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಓಬಳೇಶ್ ಮಾತನಾಡಿ, ಸಂಗೀತ ಎಲ್ಲರ ಮನಸ್ಸನ್ನು ಅರಳಿಸುತ್ತದೆ, ಕೆಲಸ ಮಾಡಿ ದಣಿದಾಗ ಸಂಗೀತವನ್ನು ಆಲಿಸಿದಾಗ ಮನಸ್ಸು ಉಲ್ಲಾಸವಾಗುತ್ತದೆ, ನಮ್ಮ ಕಾಲದಲ್ಲಿ ಜನತೆ ಹೆಚ್ಚಿನ ಸಮಯವನ್ನು ಸಂಗೀತ ಕೇಳುತ್ತ ಕೆಲಸವನ್ನು ಮಾಡುತ್ತಿದ್ದರು. ಸಂಗೀತವನ್ನು ಆಲಿಸುತ್ತಾ ಕೆಲಸವನ್ನು ಮಾಡುವುದರಿಂದ ದೈಹಿಕವಾಗಿ ಯಾವ ಶ್ರಮವೂ ಬರುತ್ತಿರಲಿಲ್ಲ, ಇಂತಹ ಶಕ್ತಿ ಸಂಗೀತಕ್ಕೆ ಇದೆ ಎಂದರು.

ಸಂಗೀತ ಎಂದರೆ ಮಾನವ ಸೇರಿದಂತೆ ಭೂಮಿಯ ಮೇಲಿನ ಎಲ್ಲಾ ಪ್ರಾಣಿ, ಪಕ್ಷಿಗಳು ಸಹಾ ಮನವನ್ನು ಸೋಲುತ್ತವೆ. ಸಂಗೀತವನ್ನು ನುಡಿಸುವುದರಿಂದ ಅಥವಾ ಅಲಿಸುವುದರಿಂದ ಮಾನಸಿಕವಾಗಿ ಸದೃಡರಾಗ ಬಹುದಾಗಿದೆ. ರಾಜ ಮಹರಾಜರ ಕಾಲದಿಂದಲೂ ಸಹಾ ಸಂಗೀತಕ್ಕೆ ಹೆಚ್ಚಿನ ಪ್ರಾತಿನಿಧ್ಯ ನೀಡಲಾಗುತ್ತಿತ್ತು. ಇದೆ ರೀತಿ ಈಗಲೂ ಸಹಾ ಸಂಗೀತ ಎಲ್ಲರ ಮನಸ್ಸನ್ನು ಆರಳಿಸುತ್ತದೆ ಎಂದು ತಿಳಿಸಿದರು.ಹಿರಿಯ ಸಂಗೀತ ಕಲಾವಿದ ಎಸ್.ವಿ.ಗುರುಮೂರ್ತಿ ಮಾತನಾಡಿ, ಸಂಗೀತ ಕಲಾವಿದರಿಗೆ ಇತ್ತಿಚಿನ ದಿನಮಾನದಲ್ಲಿ ಬೆಲೆ ಇಲ್ಲದಂತೆ ಆಗಿದೆ, ಹಿಂದಿನ ಕಾಲದಲ್ಲಿ ಸಂಗೀತಗಾರರೆಂದರೆ ಎಲ್ಲಡೆಯೂ ಸಹಾ ಗೌರವ ದೊರಕುತ್ತಿತ್ತು. ಅಲ್ಲದೆ ಇಂದಿನ ಯುವ ಜನಾಂಗ ನಮ್ಮ ಕಾಳದ ಸಂಗೀತವನ್ನು ಇಷ್ಟ ಪಡೆದೆ ಅಬ್ಬರದ ಸಂಗೀತವನ್ನು ಕೇಳುವುದಕ್ಕೆ ಮುಗಿ ಬೀಳುತ್ತಾರೆ ಎಮದು ವಿಷಾಧಿಸಿ, ಸಂಗೀತವನ್ನುನಮ್ಮಮಕ್ಕಳಿಗೆಕಲಿಸುವುದರ ಮೂಲಕ ಸಂಗೀತ ಪರಂಪರೆಯನ್ನು ಮುಂದುವರೆಸಬೇಕಿದೆ. ಚಿತ್ರದುರ್ಗದಲ್ಲಿ ಹಲವಾರು ಸಂಗೀತ ಶಾಲೆಗಳಿವೆ ಅಲ್ಲಿಗೆ ತಮ್ಮ ಮಕ್ಕಳನ್ನು ಕಳುಹಿಸುವುದರ ಮೂಲಕ ಸಂಗೀತದ ಅಭ್ಯಾಸವನ್ನು ಮಾಡಿಸುವಂತೆ ಕರೆ ನೀಡಿದರು.ಸಾಹಿತಿ ಆನಂದಕುಮಾರ್ ಮಾತನಾಡಿ, ಸಂಗೀತ ಎನ್ನವುದು ಎಲ್ಲರಿಗೂ ಸಹಾ ಅಗತ್ಯವಾಗಿದೆ. ಇದರಲ್ಲಿ ಮಾನವ, ಪ್ರಾಣಿ ಎಂಬ ಬೇಧ ಇಲ್ಲ, ಸಂಗೀತಕ್ಕೆ ಸೋಲದವರು ಯಾರು ಸಹಾ ಇಲ್ಲ, ಸಪ್ತ ಸ್ವರಗಳು ನಮ್ಮ ಬದುಕಿಗೆ ಅಡಿಪಾಯಗಳಾಗಿವೆ ಎಂದರು. ಮದಕರಿನಾಯಕ ಸಾಂಸ್ಕೃತಿಕ ಕೇಂದ್ರದ ಅಧ್ಯಕ್ಷ ಗೋಪಾಲಸ್ವಾಮಿ ನಾಯಕ್ ಮಾತನಾಡಿ, ಸಂಗೀತ ಕಲೆಯನ್ನು ಉಳಿಸಿ ಬೆಳಸಬೇಕೆಂಬ ನಿಟ್ಟಿನಲ್ಲಿ ಪ್ರತಿ ವರ್ಷವೂ ಸಹಾ ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದರ ಮೂಲಕ ಸಂಗೀತ ಕಲಾವಿದರನ್ನು ಸನ್ಮಾನಿಸಲಾಗುವುದು. ಸಂಗೀತ ಕಲಾವಿದರನ್ನು ಸರ್ಕಾರ ಗುರುತಿಸಿ ಗೌರವನ್ನು ನೀಡಬೇಕಿದೆ ಇದಕ್ಕಾಗಿ ಅರ್ಜಿಯನ್ನು ಹಾಕುವು ಸಂಪ್ರದಾಯ ಬಿಡಬೇಕಿದೆ. ಚಿತ್ರದುರ್ಗ ಸಂಗೀತಗಾರರಿಗೆ ತವರು ಮನೆ ಇದ್ದ ಹಾಗೇ ಎಂದರು.ಹಿಂದೂಸ್ತಾನಿ ಶಾಸ್ತ್ರಿಯ ಸಂಗೀತ ಕಲಾವಿದರಾದ ಸುಜೆತ್, ವಯೋಲಿನ್ವಾದ ಕಲಾವಿದರಾದ ಶ್ರೀಮತಿ ಭವ್ಯರಾಣಿ,ಜಿ.ಪಂ.ಮಾಜಿ ಉಪಾಧ್ಯಕ್ಷರಾದ ಕೆ.ಪಾಪಯ್ಯ, ಕೌಶಲ್ಯಾಧಿಕಾರಿ ಕಾಟೇಗೌಡ್ರ, ಕಣೀವೆ ಮಾರಮ್ಮ ಸಂಸ್ಕೃತಿಕ ವೇದಿಕೆಯ ಅಧ್ಯಕ್ಷ ತಿಪ್ಪೇಸ್ವಾಮಿ, ಶ್ರೀನಿವಾಸ್ ಮಳಲಿ, ಓಬಯ್ಯ, ರವಿಕುಮಾರ್ ಸೇರಿದಂತೆ ಇತರರು ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಹುಣಸೇಕಟ್ಟೆ ಗ್ರಾಮದ ಓಬಳೇಶ್‌ರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಶಾಸ್ತ್ರಿಯ ಸಂಗೀತ, ಹಿಂದೂಸ್ತಾನಿ ಸಂಗೀತ, ವಯೋಲಿನ್ ವಾದನ, ಜಾನಪದ ಸಂಗೀತ, ತತ್ವ ಪದಗಳು, ವಚನ ಸಂಗೀತ, ಸುಗಮ ಸಂಗೀತ, ಭಕ್ತಿ ಸಂಗೀತ, ಕನ್ನಡ ಗೀತ ಗಾಯನ ಹಾಗೂ ರಂಗ ಗೀತೆಗಳ ಗಾಯನ ಕಾರ್ಯಕ್ರಮ ನಡೆಯಿತು.

## ಫಾಸ್ಟ್ ನ್ಯೂಸ್

### ಉಪ ಚುನಾವಣೆ, ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸಂತೆ, ಜಾತ್ರೆ ನಿಷೇಧ

» ದಾವಣಗೆರೆ

ರಾಜ್ಯ ಚುನಾವಣಾ ಆಯೋಗದ ನಿರ್ದೇಶನದಂತೆ ಖಾಲಿ ಇರುವ ಗ್ರಾಮ ಪಂಚಾಯಿತಿ ಸದಸ್ಯ ಸ್ಥಾನಗಳಿಗೆ ನವೆಂಬರ್ 23 ರಂದು ಮತದಾನ ನಡೆಯಲಿದ್ದು ಉಪಚುನಾವಣೆ ನಡೆಯುವ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ನಡೆಯುವ ಸಂತೆ, ಜಾತ್ರೆಗಳನ್ನು ನಿಷೇಧಿಸಿ ಜಿಲ್ಲಾ ದಂಡಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಆದೇಶಿಸಿದ್ದಾರೆ. ನ್ಯಾಮತಿ ತಾಲ್ಲೂಕಿನ ಚಿನ್ನಿಕಟ್ಟೆ, ಹರಿಹರ ತಾಲ್ಲೂಕಿನ ಸಾರಥಿ, ಉಕ್ಕಡಗಾತ್ರಿ, ದಾವಣಗೆರೆ ತಾಲ್ಲೂಕಿನ ಗೋಪನಾಳ, ಹೆಬ್ಬಾಳು, ಚನ್ನಗಿರಿ ತಾಲ್ಲೂಕಿನ ಕೆರೆಬಿಳಚಿ, ತಣಿಗೆರೆ, ಬೆಳ್ಳಿಗನೂರು, ಸಂತೆಬೆನ್ನೂರು, ಜಗಳೂರು ತಾಲ್ಲೂಕಿನ ಹನುಮಂತಾಪುರ, ಬಸವನಕೋಟೆ, ಹೊನ್ನಾಳಿ ತಾಲ್ಲೂಕಿನ ಕುಂದೂರು ಗ್ರಾಮ ಪಂಚಾಯಿತಿಗಳಲ್ಲಿ ನವೆಂಬರ್ 23 ರಂದು ನಡೆಯುವ ಸಂತೆ, ಜಾತ್ರೆಯನ್ನು ನಿಷೇಧಿಸಿಲಾಗಿರುತ್ತದೆ.

### ನಾರಾಯಣಘಟ್ಟ ಮತ್ತು ಸರೋಜಮ್ಮ ಗಾಂಧಿ ಪುರಸ್ಕಾರ ಪುದುವಟ್ಟು ದತ್ತಿಗೆ ಹನುಮಂತಪ್ಪ ಆಯ್ಕೆ

» ಚಿತ್ರದುರ್ಗ

ಕನ್ನಡ ಸಾಹಿತ್ಯ ಪರಿಷತ್ತು 69ನೇ ಕನ್ನಡ ರಾಜ್ಯೋತ್ಸವ ಆಚರಣೆ ಹಾಗೂ ದತ್ತಿ ಪ್ರಶಸ್ತಿ ಪ್ರದಾನ ಸಮಾರಂಭವೂ ನ. 23ರ ಶನಿವಾರ, ಸಂಜೆ 4 ಗಂಟೆಗೆ ಬೆಂಗಳೂರಿನ ಚಾಮರಾಜಪೇಟೆಯ ಕನ್ನಡ ಸಾಹಿತ್ಯ ಪರಿಷತಿನ ಶ್ರೀ ಕೃಷ್ಣರಾಜ ಪರಿಷತ್ತಿನ ಮಂದಿರದಲ್ಲಿ ನಡೆಯಲಿದೆ. ಕನ್ನಡ ಕಾಯಕ ದತ್ತಿ ಪ್ರಶಸ್ತಿ, ಶ್ರೀಮತಿ ಟಿ. ಗಿರಿಜ ಸಾಹಿತ್ಯ ದತ್ತಿ ಪ್ರಶಸ್ತಿ, ಶ್ರೀಮತಿ ಕಂಡ್ಲೂರು ಗಿರಿಜಮ್ಮ ಮತ್ತು ಪರಸಿಂಹ ಜೋಗಿ ದತ್ತಿ ಪ್ರಶಸ್ತಿ, ಎ.ಆರ್. ನಾರಾಯಣಘಟ್ಟ ಮತ್ತು ಸರೋಜಮ್ಮ ಗಾಂಧಿ ಪುರಸ್ಕಾರ ಪುದುವಟ್ಟು ದತ್ತಿ ಪ್ರಶಸ್ತಿಗೆ ವಿವಿಧ ವ್ಯಕ್ತಿಗಳನ್ನು ಆಯ್ಕೆ ಮಾಡಲಾಗಿದೆ. ಇದರಲ್ಲಿ ಎ.ಆರ್. ನಾರಾಯಣಘಟ್ಟ ಮತ್ತು ಸರೋಜಮ್ಮ ಗಾಂಧಿ ಪುರಸ್ಕಾರ ಪುದುವಟ್ಟು ದತ್ತಿಗೆ ಚಿತ್ರದುರ್ಗದ ರಾಜ್ಯ ಸಭೆಯ ಮಾಜಿ ಸದಸ್ಯರಾದ ಹೆಚ್. ಹನುಮಂತಪ್ಪರವರು ಆಯ್ಕೆಯಾಗಿದ್ದಾರೆ.
ರಾಷ್ಟ್ರೀಯ ವಿದ್ಯಾಲಯ ಸಂಸ್ಥೆಯಲ್ಲಿ 32 ವರ್ಷಗಳ ಕಾಲ ಸೇವೆ ಸಲ್ಲಿಸಿರುವ ಹಿರಿಯ ಗಾಂಧಿವಾದಿ ಎ.ಆರ್ ನಾರಾಯಣಘಟ್ಟ ಅವರು ಪಠ್ಯಪುಸ್ತಕ ರಚನೆ ಸಮಿತಿ ಮತ್ತು ಪರಿಷ್ಕರಣ ಸಮಿತಿಯಲ್ಲಿ ಮಹತ್ವದ ಸೇವೆ ಸಲ್ಲಿಸಿದ್ದಾರೆ. ಇವರು ಗಾಂಧೀಜಿ ಅವರ ಜೀವನ ಆದರ್ಶಗಳನ್ನು ಆಳವಡಿಸಿಕೊಂಡು ಉತ್ತಮ ಸಾಧನೆ ತೋರಿದವರನ್ನು ಗೌರವಿಸುವ ಸಲುವಾಗಿ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಎ.ಆರ್. ನಾರಾಯಣಘಟ್ಟ ಮತ್ತು ಸರೋಜಮ್ಮ ಗಾಂಧಿ ಪುರಸ್ಕಾರ ಪುದುವಟ್ಟು ಹೆಸರಿನಲ್ಲಿ 2 ಲಕ್ಷ ರೂಪಾಯಿಗಳನ್ನು ದತ್ತಿನಿಧಿ ಸ್ಥಾಪಿಸಿರುತ್ತಾರೆ. ದಾನಿಗಳ ಆಶಯದಂತೆ ಗಾಂಧಿ ಸಾಹಿತ್ಯ ರಚನೆ, ಆಸ್ಪೃಶ್ಯತಾ ನಿರ್ಮೂಲನ, ಪಾನ ನಿರೋಧ, ಖಾದಿ ಪ್ರಚಾರ ಮತ್ತು ಗ್ರಾಮಾಭಿವೃದ್ಧಿ ಈ ಅಂಶಗಳಲ್ಲಿ ತಮ್ಮನ್ನು ತೊಡಗಿಸಿಕೊಂಡಿರುವ ಮಹನೀಯರಿಗೆ ಹಾಗೂ ಗಾಂಧಿ ಸಂಘ ಸಂಸ್ಥೆಗಳಿಗೆ ಪ್ರತಿ ವರ್ಷ ಕನ್ನಡ ಸಾಹಿತ್ಯ ಪರಿಷತ್ತು ಪ್ರಶಸ್ತಿ ನೀಡುತ್ತಾ ಬಂದಿದೆ. ಹೆಚ್.ಹನುಮಂತಪ್ಪರವರು 1982–2000ವರೆಗೆ ರಾಜ್ಯ ಸಭಾ ಸದಸ್ಯರಾಗಿದ್ದರು. ದಕ್ಷಿಣ ಭಾರತ ಹಿಂದಿ ಪ್ರಚಾರದ ಮುಖ್ಯಸ್ಥರು, ಭಾರತ್ ಸೇವಾದಳ ಕರ್ನಾಟಕ ಶಾಖೆಯ ಅಧ್ಯಕ್ಷರಾಗಿ ಸೇವೆಯನ್ನು ಸಲ್ಲಿಸಿದ್ದಾರೆ. ಚಿತ್ರದುರ್ಗದ ಸರಸ್ವತಿ ಕಾನೂನು ಕಾಲೇಜಿನ ಅಧ್ಯಕ್ಷರಾಗಿ ರುತ್ತಾರೆ ರಾಷ್ಟ್ರೀಯ ಪ.ಜಾ/ಪ.ಪಂ. ಆಯೋಗದ ಮಾಜಿ ಅಧ್ಯಕ್ಷರಾಗಿ ಮತ್ತು ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದ ಸದಸ್ಯರಾಗಿ,ಹಾಗೂ ಭದ್ರಾ ಮೇಲ್ದಂಡೆ ಯೋಜನೆಯ ಹೋರಾಟ ಸಮಿತಿಯ ಪ್ರಥಮ ಅಧ್ಯಕ್ಷರಾಗಿ ಸೇವೆ ಸಲ್ಲಿಸಿರುತ್ತಾರೆ.ಎಸ್ ನಿಜಲಿಂಗಪ್ಪ ಸ್ಮಾರಕದ ಗೌರವ ಕಾರ್ಯದರ್ಶಿಯಾಗಿದ್ದಾರೆ. ಇವರ ಹಿರಿಯ ಗಾಂಧಿವಾದಿಗಳಾಗಿ ಅವರು ಸಲ್ಲಿಸಿದ ಸೇವೆಯನ್ನು ಪರಿಗಣಿಸಿ ಕನ್ನಡ ಸಾಹಿತ್ಯ ಪರಿಷತ್ತು 2024ನೇ ಸಾಲಿನ ನಾರಾಯಣ ಘಟ್ಟ ದತ್ತಿ ನೀಡಿ ಗೌರವಿಸುತ್ತಿದೆ.

### ಮಂಜುನಾಥ್‌ಗೊಪ್ಪೆಗೆ ಟಿಪ್ಪುಸುಲ್ತಾನ್ ಪ್ರಶಸ್ತಿ.



» ಚಿತ್ರದುರ್ಗ

ಕರ್ನಾಟಕ ರಾಜ್ಯ ಟಿಪ್ಪುಸುಲ್ತಾನ್ ಅಭಿಮಾನಿಗಳ ಮಹಾವೇದಿಕೆಯಿಂದ ತ.ರಾ.ಸು. ರಂಗಮಂದಿರದಲ್ಲಿ ಬುಧವಾರ ನಡೆದ ಹಜರತ್ ಟಿಪ್ಪುಸುಲ್ತಾನ್‌ರವರ 274 ನೇ ಜಯಂತಿ ಹಾಗೂ 69 ನೇ ಕನ್ನಡ ರಾಜ್ಯೋತ್ಸವದಲ್ಲಿ ನಗರಸಭೆ ಮಾಜಿ ಅಧ್ಯಕ್ಷ ಹಾಲಿ ಸದಸ್ಯ ಮಂಜುನಾಥ್‌ಗೊಪ್ಪೆರವರಿಗೆ ಟಿಪ್ಪುಸುಲ್ತಾನ್ ರಾಜ್ಯ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

# ಈ ಸಾರಿ ಜೋರಾಗಿ ನಡೆದ ಸಿರಿಧಾನ್ಯ ಮೇಳ

## ಇಡೀ ರಾಜ್ಯದಲ್ಲೆ ಸಿರಿಧಾನ್ಯಗಳನ್ನ ಹೆಚ್ಚು ಬೆಳೆಯುವ ತಾಲೂಕು ಯಾವುದಾದರು ಇದೆ ಎಂದರೆ ಅದು ಹೊಸದುರ್ಗ ತಾಲೂಕು ಮಾತ್ರ, ಇಲ್ಲಿ ಸಿರಿಧಾನ್ಯ ಉತ್ಪನ್ನಗಳದ್ದೇ ಕಾರುಬಾರು,ಬೆಳೆಯುವ ರೈತರದ್ದೆ ಧರ್ಬಾರು

» ನಾಗತಿಹಳ್ಳಿಮಂಜುನಾಥ್, ಹೊಸದುರ್ಗ






ಹೊಸದುರ್ಗ: ಬಯಲು ಸೀಮೆಯ ನಾಡಾಗಿರುವ ಹೊಸದುರ್ಗ ಕಳೆದ ಹತ್ತು ವರ್ಷಗಳ ಹಿಂದೆ, ಹೊಸದುರ್ಗ ತಾಲೂಕು ತೆಂಗು ಹಾಗೂ ದಾಳಿಂಬೆ ನಾಡಾಗಿತ್ತು, ತಾಲ್ಲೂಕಿನ ಮಣ್ಣು ಮತ್ತು ವಾತಾವರಣ ಸಿರಿಧಾನ್ಯ ಬೆಳೆಗೆ ಸೂಕ್ತವಾಗಿದೆ. ಇಲ್ಲಿ ಸಾವೆ, ಊದಲು, ಕೊರ್ಲೆ, ಆರ್ಕಾ ಸೇರಿದಂತೆ ಹಲವು ಸಿರಿಧಾನ್ಯಗಳನ್ನು ಬೆಳೆಯಲಾಗುತ್ತದೆ.

ಆದರೆ ಹತ್ತು ವರ್ಷಗಳ ಈಚೆಗೆ ತಾಲೂಕಿನ ರೈತರು ರಾಗಿ, ಸಾವೆ, ನವಣೆ, ಜೋಳ, ಬರಗು, ಕೊರ್ಲೆ, ಆರ್ಕಾ ಊದಲು, ಇಂತಹ ಬೆಳೆಗಳನ್ನು ಬೆಳದು ಮಾರುಕಟ್ಟೆಯ ಮೂಲಕ ನಾಡಿಗೆ ಪರಿಚಯಿಸಿದ ಪರಿಣಾಮ ಇಂದು ಸಿರಿಧಾನ್ಯಗಳ ನಾಡಾಗಿ ಬದಲಾಗಿದೆ.

ಈಗಾಗಲೆ ಹೊಸದುರ್ಗ ತಾಲೂಕು ಎಂಬುದು "ಸಿರಿಧಾನ್ಯಗಳ ತವರೂರು" ಎಂಬ ಹೆಸರು ಪಡೆದಿದ್ದು ಅಧಿಕೃತವಾಗಿ ಹೊಸದುರ್ಗ ಪಟ್ಟಣಕ್ಕೆ ಪ್ರವೇಶಿಸುವ ಮುನ್ನ ಮೂರು ಕಡೆ ಸಿರಿಧಾನ್ಯಗಳ ನಾಡಿಗೆ ಸ್ವಾಗತ ಎಂಬ ನಾಮಕರಣದ ಸ್ವಾಗತ ಕಮಾನುಗಳನ್ನ ನ.18 ರಂದು ಮಂಗಳವಾರ ಅಧಿಕೃತವಾಗಿ ಹಾಕಲಾಗಿರುವ ಪಟ್ಟಣದ ಪ್ರವೇಶದ್ವಾರದ ಕಮಾನುಗಳನ್ನು ಶಾಸಕ ಬಿ.ಜಿ.ಗೋವಿಂದಪ್ಪನವರು ಉದ್ಘಾಟನೆಯನ್ನೂ ಮಾಡಿದ್ದಾರೆ.

ಹೌದು ಇಡೀ ರಾಜ್ಯದಲ್ಲೆ ಸಿರಿಧಾನ್ಯಗಳನ್ನ ಹೆಚ್ಚು ಬೆಳೆಯುವ ತಾಲೂಕು ಯಾವುದಾದರು ಇದೆ ಎಂದರೆ ಅದು ಹೊಸದುರ್ಗ ತಾಲೂಕು ಮಾತ್ರ ಸಿರಿಧಾನ್ಯ ವಿಚಾರದಲ್ಲಿ ನಮ್ಮ ಹೊಸದುರ್ಗ ತಾಲೂಕು ಎಂಬುದು ರಾಜ್ಯದಲ್ಲೆ ಮನೆ ಮಾತಾಗಿದೆ ಈಮಾತನ್ನು ನಾನು ಹೇಳುತ್ತಿಲ್ಲ ಕೃಷಿ ವಿಜ್ಞಾನಿಗಳೆ ಹೇಳುತ್ತಾರೆ.ಹೊಸದುರ್ಗ ಸಿರಿಧಾನ್ಯಗಳ ನಾಡು ಎಂಬ ನಾಮಕರಣವೂ ಆಗಿದೆ.

ತಾಲ್ಲೂಕಿನ ಕೆಲ್ಲೋಡಿನ ಕನಕಧಾಮದ ಶ್ರೀಮಠದ ಆವರಣದಲ್ಲಿ ಕನಕ ಜಯಂತಿ ಅಂಗವಾಗಿ ಒಟ್ಟು ಮೂರು ದಿನಗಳ ವಿನೂನತ ಕಾರ್ಯಕ್ರಮಗಳನ್ನ ಆಯೋಜನೆ ಮಾಡಲಾಗಿತ್ತು ಇಂತಹ ಕಾರ್ಯಕ್ರ ಮಗಳಲ್ಲಿ ಒಂದು ದಿನದ ಕಾರ್ಯಗಾರವಾಗಿ ಸಿರಿಧಾನ್ಯದ ಬಗ್ಗೆ ಕೃಷಿ ಅಧಿಕಾರಿ ಸಿ.ಎಸ್.ಈಶ ಅವರ ನೇತೃತ್ವದಲ್ಲಿ ಇಲಾಖೆಯವರು ಆಯೋಜನೆ ಮಾಡಿ ಸಿರಿಧಾನ್ಯ ಕೃಷಿ ವಸ್ತು ಪ್ರದರ್ಶನ ಕಾರ್ಯಕ್ರಮವನ್ನ ಆಯೋಜನೆ ಮಾಡಲಾಗಿತ್ತು ಈ ಕಾರ್ಯಕ್ರಮದಲ್ಲಿ ಸಿರಿಧಾನ್ಯ ಉತ್ಪನ್ನಗಳಿಗೆ ಬೇಡಿಕೆ ಹೆಚ್ಚಿದ್ದು, ಖರೀದಿದಾರರ ಸಂಖ್ಯೆ ಬಲು ಜೋರಾಗಿ ಇದ್ದುದ್ದನ್ನ ನೋಡಲು ಎರಡು ಕಣ್ಣಗಳು ಸಾಲದಾದವು ಎಂಬಂತಾಯಿತು.

ಒಂದೆಡೆ ನಿರಂತರವಾಗಿ ನಡೆಯುತ್ತಿರುವ ವಿಚಾರ ಸಂಕಿರಣ, ಮತ್ತೊಂದು ರೈತರಿಗೆ ಅನುಕೂಲವಾಗುವಂತಹ ಎಲ್ಲಾ ಇಲಾಖೆಗಳ ಮಾಹಿತಿಯನ್ನೊಳಗೊಂಡ ಮಳಿಗೆಗಳು ಕೃಷಿ ಉಪಕರಣಗಳು, ಸಿರಿಧಾನ್ಯಗಳ ಉಪಯೋಗ, ಮೌಲ್ಯವರ್ಧನೆ, ಆರೋಗ್ಯಕರ ಅಂಶಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮೀನುಗಾರಿಕೆ, ತೋಟಗಾರಿಕೆ, ರೇಷ್ಮೆ ಸೇರಿದಂತೆ ಹಲವು ಇಲಾಖೆಗಳಲ್ಲಿ ಸೌಲಭ್ಯಗಳು, ಆರೋಗ್ಯಕರ ಅಂಶಗಳ ಬಗ್ಗೆ ಸಂಪೂರ್ಣ ಮಾಹಿತಿ ಇತ್ತು.

ಜಂಟಿ ಕೃಷಿ ನಿರ್ದೇಶಕ ಬಿ.ಮಂಜುನಾಥ ಅವರ ಮಾರ್ಗದರ್ಶನ ರಾಜ್ಯ ಮಟ್ಟದ ಸಂಪನ್ಮೂಲ ವ್ಯಕ್ತಿ ಯೋಗೀಶ್ ಅಪ್ಪಾಜಯ್ಯ ಅವರ ಅಮೂಲ್ಯವಾದ ಮಾತುಗಳ ನೀತಿ ಹಾಗೂ ಪ್ರಾಪಂಚಿಕ ಪ್ರಜ್ಞಾ ಪಾಠವಾಗಿತ್ತು.

# ತಾಯಿ ಮರಣ, ಹೆರಿಗೆ ಶಸ್ತ್ರ ಚಿಕಿತ್ಸೆ ಪ್ರಮಾಣ ತಗ್ಗಿಸಲು ಕ್ರಮಕ್ಕೆ ಸೂಚನೆ; ದಿನೇಶ್ ಗುಂಡೂರಾವ್

» ದಾವಣಗೆರೆ



ರಾಷ್ಟ್ರೀಯ ಆರೋಗ್ಯ ಅಭಿಯಾನದ ಮೂಲಕ ಹೆರಿಗೆ ಸಮಯದಲ್ಲಿ ತಾಯಿ ಮಗುವಿನ ಸುರಕ್ಷೆಗೆ ಹೆಚ್ಚಿನ ಒತ್ತು ನೀಡಿದ್ದು ಮರಣ ಪ್ರಮಾಣವನ್ನು ಶೂನ್ಯಕ್ಕಿಳಿಸಬೇಕೆಂಬುದು ಇದರ ಉದ್ದೇಶವಾಗಿದೆ. ದಾವಣಗೆರೆ ಜಿಲ್ಲೆಯಲ್ಲಿ ಕಳೆದ ಏಪ್ರಿಲ್‌ನಿಂದ ಅಕ್ಟೋಬರ್ ವರೆಗೆ 28 ಹೆರಿಗೆ ಸಮಯದಲ್ಲಿ ತಾಯಿ ಮರಣ ಪ್ರಕರಣಗಳು ಕಂಡುಬಂದಿದ್ದು ಸರಿಯಾಗಿ ಆಡಿಟ್ ಮಾಡಿ ತಾಯಿಯ ಸುರಕ್ಷತೆಗೆ ಹೆಚ್ಚಿನ ಒತ್ತು ನೀಡಬೇಕೆಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ದಿನೇಶ್ ಗುಂಡೂರಾವ್ ಸೂಚನೆ ನೀಡಿದರು.

ಅವರು ಬುಧವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆರೋಗ್ಯ ಇಲಾಖೆ ಕಾರ್ಯಕ್ರಮಗಳ ಬಗ್ಗೆ ಜಿಲ್ಲಾಧಿಕಾರಿ ಹಾಗೂ ಆರೋಗ್ಯ ಇಲಾಖೆ ಅಧಿಕಾರಿಗಳೊಂದಿಗೆ ನಡೆಸಿದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದರು. ಕಳೆದ 7 ತಿಂಗಳಲ್ಲಿ ಹೆರಿಗೆ ವೇಳೆ 28 ತಾಯಂದಿರು ಮೃತರಾಗಿದ್ದು ಇದರಲ್ಲಿ 23 ಸರ್ಕಾರಿ ಹಾಗೂ 5 ಖಾಸಗಿ ಆಸ್ಪತ್ರೆಯಲ್ಲಿ ಮರಣ ಹೊಂದಿದ್ದಾರೆ. ಆದರೆ ಈ ಪ್ರಮಾಣ ಗಣನೀಯವಾಗಿ ಇಳಿಕೆಯಾಗಬೇಕಿದ್ದು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಸಮಿತಿಯಲ್ಲಿ ಮರಣದ ಬಗ್ಗೆ ಆಡಿಟ್ ಮಾಡಿ ಸರಿಯಾದ ಕ್ರಮ ಕೈಗೊಳ್ಳಬೇಕೆಂದು ಸೂಚನೆ ನೀಡಿದರು.

ಸಿಜೆರಿಯನ್ ಪ್ರಮಾಣ ತಗ್ಗಿಸಲು ಎಸ್‌ಓಪಿ; ದಾವಣಗೆರೆ ಜಿಲ್ಲೆಯಲ್ಲಿ ಏಪ್ರಿಲ್ ನಿಂದ ಅಕ್ಟೋಬರ್ ಅಂತ್ಯದವರೆಗೆ ಸರ್ಕಾರಿ ಆಸ್ಪತ್ರೆಗಳಲ್ಲಿ ಆದ 7676 ಹೆರಿಗೆ ಪ್ರಕರಣಗಳಲ್ಲಿ 3079 ಸಿಜೆರಿಯನ್ ಶೇ 40 ಹಾಗೂ ಖಾಸಗಿ ಆಸ್ಪತ್ರೆಗಳಲ್ಲಿ ಆದ 4291 ಹೆರಿಗೆ ಪ್ರಕರಣಗಳಲ್ಲಿ 3093 ಸಿಜೆರಿಯನ್ ಹೆರಿಗೆಯಾಗಿದ್ದು ಶೇ 72 ರಷ್ಟು ಸಿಜೆರಿಯನ್ ಮಾಡಲಾಗಿದೆ. ಆದರೆ ಸಿಜೆರಿಯನ್ ಗಿಂತ ಸಹಜ ಹೆರಿಗೆಯಾದಲ್ಲಿ ಆರೋಗ್ಯವಂತ ಮಗು ಜನಿಸಲು ಸಾಧ್ಯವಿದ್ದು ಇದಕ್ಕೆ ಬೇಕಾದ ಮಾರ್ಗಸೂಚಿಯನ್ನು ಎಲ್ಲಾ ಆಸ್ಪತ್ರೆಗಳಿಗೆ ಕಳುಹಿಸಿಕೊಡಲಾಗುತ್ತದೆ. ಅಗತ್ಯವಿದ್ದಲ್ಲಿ ಮಾತ್ರ ಸಿಜೆರಿಯನ್ ಮಾಡಬೇಕಾಗುತ್ತದೆ. ಅನಾವಶ್ಯಕ ಸಿಜೆರಿಯನ್ ಹೆರಿಗೆಯನ್ನು ಗಣನೀಯವಾಗಿ ತಡೆಗಟ್ಟಬೇಕಾಗಿದೆ. ಗರ್ಭಿಣಿಯರಿಗೆ ಸಹಜ ಹೆರಿಗೆಯಾಗಲು ಕೈಗೊಳ್ಳಬೇಕಾದ ಚಟುವಟಿಕೆಗಳ ಬಗ್ಗೆ ಮತ್ತು ಮಾನೋಸ್ಥೈರ್ಯ ತುಂಬಲು ಕೌನ್ಸಿಲಿಂಗ್ ಮಾಡಬೇಕಾಗುತ್ತದೆ ಎಂದರು.

ಲಿಂಗಾನುಪಾತದಲ್ಲಿ ಕುಸಿತ; ದಾವಣಗೆರೆ ಜಿಲ್ಲೆಯಲ್ಲಿ ಹೆಣ್ಣು ಮತ್ತು ಗಂಡಿನ ಲಿಂಗಾನುಪಾತದಲ್ಲಿ ಇಳಿಕೆಯತ್ತ ಸಾಗುತ್ತಿದ್ದು ಇದಕ್ಕೆ ನಿಖರವಾದ ಕಾರಣ ವಿಶ್ಲೇಷಿಸುವ ಅಗತ್ಯವಿದೆ. ರಾಷ್ಟ್ರೀಯ ಕುಟುಂಬ ಆರೋಗ್ಯ ಸಮೀಕ್ಷೆಯನ್ವಯ 2001 ರಲ್ಲಿ 946, 2011 ರಲ್ಲಿ 948, 2015–16 ರಲ್ಲಿ 1029 ಹಾಗೂ 2019–20 ರಲ್ಲಿ 797 ಇದೆ. ಸಿವಿಲ್ ರಿಜಿಸ್ಟ್ರೇಷನ್ ಸಿಸ್ಟಂ ಅನ್ವಯ 2020 ರಲ್ಲಿ 957, 2021 ರಲ್ಲಿ 946, 2022 ರಲ್ಲಿ 929 ಇದ್ದರೆ 2023 ರಲ್ಲಿ ಲಿಂಗಾನುಪಾತ 935 ಕ್ಕೆ ಕುಸಿದಿದೆ. ಇದನ್ನು ಆರೋಗ್ಯ ಇಲಾಖೆ ಅಧಿಕಾರಿಗಳು ಗಂಭೀರವಾಗಿ ತೆಗೆದುಕೊಂಡು ಭ್ರೂಣಹತ್ಯೆ ಪ್ರಕರಣಗಳು ನಡೆಯುತ್ತಿವೆಯೋ ಇಲ್ಲವೋ ಎಂಬ ಬಗ್ಗೆ ಮಾಹಿತಿ ಸಂಗ್ರಹಿಸುವ ಜೊತೆಗೆ ಕಠಿಣ ಕ್ರಮಕ್ಕೆ ಮುಂದಾಗಬೇಕೆಂದು ತಿಳಿಸಿದರು.

# ಯೋಗ ಗುರು ಪರಶುರಾಮ್‌ಗೆ 'ಕರ್ನಾಟಕ ರತ್ನ' ಪ್ರಶಸ್ತಿ ಪ್ರದಾನ



» ದಾವಣಗೆರೆ

ನಗರದ ಪ್ರತಿಷ್ಠಿತ ಯೋಗ ಕೇಂದ್ರವಾದ ಎಸ್‌ಎಸ್‌ಎಸ್ ಯೋಗ ಫೆಡರೇಷನ್ ಸಂಸ್ಥಾಪಕ ಅಧ್ಯಕ್ಷರು ಹಾಗೂ ಅಂತಾರಾಷ್ಟ್ರೀಯ ಯೋಗ ಪಟು, ಯೋಗ ಗುರು ಡಾ.ಎನ್.ಪರಶುರಾಮ್ ಅವರಿಗೆ 'ಕರ್ನಾಟಕ ರತ್ನ' ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಬೆಂಗಳೂರಿನ ಶಾಂತಿಗೃಹ ಪ್ಯಾಲೇಸ್ ರಸ್ತೆಯಲ್ಲಿರುವ ಭಾರತ್ ಸ್ಕೌಟ್ ಅಂಡ್ ಗೈಡ್ಸ್ ಆಡಿಟೋರಿಯಂನಲ್ಲಿ ನಡೆದ ಸುವರ್ಣ ಕರ್ನಾಟಕ ಕಾರ್ಮಿಕರ ವೇದಿಕೆ ಹಾಗೂ ಎಂ.ಎಂ.ಭಾರತ್ ಟಿವಿ ಸಂಯುಕ್ತ ಆಶ್ರಯದಲ್ಲಿ ನಡೆದ 79ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಯೋಗ ಗುರು ಡಾ.ಎನ್.ಪರಶುರಾಮ್ ಅವರಿಗೆ ಎಂ.ಎಂ.ಭಾರತ್ ಟಿವಿಯ ಸಂಸ್ಥಾಪಕ ಡಾ.ಹುಸೇನ್, ಚಿತ್ರನಟಿ ಪ್ರೇಮ, ಶ್ರೀಗಳು, ಸಂಸ್ಥೆಯ ಗೌರವಾಧ್ಯಕ್ಷ ಅನು ಆರ್. ಅಮ್ಮ, 'ಕರ್ನಾಟಕ ರತ್ನ' ಪ್ರಶಸ್ತಿ ಪ್ರದಾನ ಮಾಡಿದ್ದಾರೆ. ಪ್ರಶಸ್ತಿಗೆ ಭಾಜನರಾಗಿರುವ ಯೋಗ ಗುರು ಡಾ.ಎನ್.ಪರಶುರಾಮ್ ಅವರಿಗೆ ಅಭಿನಂದನೆ ಸಲ್ಲಿಸಿದ್ದಾರೆ.

## ಪ್ರಮುಖ ಸುದ್ದಿ

### ಮೂಲಭೂತ ಸೌಕರ್ಯಗಳ ಜೊತೆಗೆ ಆರೋಗ್ಯ ಸಿಬ್ಬಂದಿ ಸಲ್ಲಿಸುವ ಸೇವೆ ಬಹಳ ಮುಖ್ಯ

# ರಾಮಗೊಂಡನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರ ಕಟ್ಟಡ ಉದ್ಘಾಟನೆ

» ದಾವಣಗೆರೆ



ನಾವು ಒಂದು ಕಟ್ಟಡ ನಿರ್ಮಾಣ ಮಾಡಿ ಅದಕ್ಕೆ ಬೇಕಾಗಿರುವಂತಹ ಸಲಕರಣೆಗಳನ್ನು ಕೊಟ್ಟು ಅಷ್ಟಕ್ಕೆ ನಮ್ಮ ಕೆಲಸ ಮುಗಿಯಿತು ಅಂದುಕೊಂಡರೆ ಅದು ನಿಜವಾದ ಕಾರ್ಯವಲ್ಲ, ಮುಖ್ಯವಾಗಿ ಅಲ್ಲಿರುವಂತಹ ಸಿಬ್ಬಂದಿಗಳು ಯಾವ ರೀತಿ ಕೆಲಸ ಮಾಡುತ್ತಾರೆ ಎನ್ನುವುದರ ಮೇಲೆ ಅವಲಂಭಿತವಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ದಿನೇಶ್ ಗುಂಡೂರಾವ್ ತಿಳಿಸಿದರು.

ಅವರು (ನ.20) ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರುಗಳ ಸಂಯುಕ್ತಾಶ್ರಯದಲ್ಲಿ ಮಾಯಕೊಂಡ ವಿಧಾನಸಭಾ ಕ್ಷೇತ್ರದ ರಾಮಗೊಂಡನಹಳ್ಳಿ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿದ ಪ್ರಾಥಮಿಕ ಆರೋಗ್ಯ ಕೇಂದ್ರ ಕಟ್ಟಡದ ಉದ್ಘಾಟನೆ ನೆರವೇರಿಸಿ ಮಾತನಾಡಿದರು. ಕಟ್ಟಡ ಚೆನ್ನಾಗಿದ್ದು ಅಲ್ಲಿ ಕೆಲಸ ಮಾಡುವವರ ಆಸಕ್ತಿ ಕಡಿಮೆ ಇದ್ದರೆ ಅಲ್ಲಿ ಏನೇ ಮಾಡಿದರೂ ಪ್ರಯೋಜನವಿಲ್ಲ. ಆದ್ದರಿಂದ ಅಲ್ಲಿನ ಸಿಬ್ಬಂದಿಗಳು ಸಾರ್ವಜನಿಕರಿಗೆ ಒಳ್ಳೆಯ ಸೇವೆ ಮಾಡಿದಾಗ ಮಾತ್ರ ಸರ್ಕಾರದ ಯೋಜನೆಗಳು ಸಾರ್ಥಕವಾಗುತ್ತದೆ ಎಂದು ತಿಳಿಸಿದರು.

ನಮ್ಮ ಇಲಾಖೆಯಿಂದ ಇನ್ನೂ ಹೆಚ್ಚಿನ ಮಟ್ಟದಲ್ಲಿ ಮೂಲಭೂತ ಸೌಕರ್ಯಗಳ ವ್ಯವಸ್ಥೆಯನ್ನು ಮಾಡಲಾಗುವುದು ಎಂದು ತಿಳಿಸಿದರು. ಸಾರ್ವಜನಿಕರ ವಿಶ್ವಾಸ ಗಳಿಸಿಕೊಂಡುಜೊತೆಯಲ್ಲಿಸೇರಿಸಿಕೊಂಡು ಒಳ್ಳೆಯ ಕೆಲಸ ಮಾಡಲಾಗುವುದು ಎಂದು ತಿಳಿಸಿದರು.

ಸಾರ್ವಜನಿಕರು ತಮ್ಮ ಆರೋಗ್ಯದ ಕಡೆ ಹೆಚ್ಚಿನ ಮಹತ್ವ ನೀಡಬೇಕು. ಮಧುಮೇಹ ಹಾಗೂ ರಕ್ತದೊತ್ತಡಕ್ಕೆ ಸರಿಯಾದ ಚಿಕಿತ್ಸೆ ಪಡೆದುಕೊಳ್ಳಬೇಕು. ಜನವರಿಯಿಂದ ಇಡೀ ರಾಜ್ಯಾದ್ಯಂತ ಪ್ರಾಥಮಿಕ ಚಿಕಿತ್ಸೆಗೆ ಅವಶ್ಯವಿರುವಸವಲತ್ತುಗಳನ್ನುಮನೆಮನೆಗೆ ತಲುಪಿಸುವ ಕಾರ್ಯ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಎಲ್ಲಿ ಮೂಲಭೂತ ಸೌಕರ್ಯಗಳು ಲಭ್ಯವಿಲ್ಲವೂ,ಅಂತಕಡೆಹೆಚ್ಚಿನಗಮನವಿಟ್ಟು ಸಹಕಾರ ಮಾಡಬೇಕಾಗಿದೆ ಎಂದು ತಿಳಿಸಿ ರಾಜ್ಯದ 500 ಪ್ರಾಥಮಿಕ ಕೇಂದ್ರಗಳಿಗೆ ಸೋಲಾರ್ ಅಳವಡಿಸಲಾಗುತ್ತದೆ ಎಂದು ತಿಳಿಸಿದರು.

ಲೋಕಸಭಾ ಸದಸ್ಯರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಮಾತನಾಡಿ, ಜನರ ಸಲಹೆ ಸೂಚನೆ ಸಹಕಾರದೊಂದಿಗೆ ಸಮಗ್ರ ಅಭಿವೃದ್ಧಿ ನಿಟ್ಟಿನಲ್ಲಿ ಕೆಲಸ ಮಾಡಿದಾಗ ಮಾತ್ರ ಇತಿಹಾಸ ಬರೆಯಲು ಸಾಧ್ಯ ಎಂದು ತಿಳಿಸಿ ಶಿಕ್ಷಣ, ಆರೋಗ್ಯ, ಯುವಕ ಯುವತಿಯರಿಗೆ ಉದ್ಯೋಗ ಹಾಗೂ ನಮ್ಮ ರೈತರ ಸಮಸ್ಯೆಗಳಿಗೆ ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇನೆ ಎಂದು ಹೇಳಿದ್ದೆ ಅದನ್ನು ಈಗಾಗಲೇ ಪ್ರಾರಂಭ ಮಾಡಲಾಗಿದೆ ಎಂದು ತಿಳಿಸಿದರು.

ರಾಮಗೊಂಡನಹಳ್ಳಿ ಗ್ರಾಮಸ್ಥರು ರಸ್ತೆ ಕಾಮಗಾರಿ ಬಗ್ಗೆ ಕೇಳಿದ್ದು ಇದನ್ನು ಕ್ರಮೇಣವಾಗಿ ಪಟ್ಟಿ ಮಾಡಿಕೊಂಡು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚೆ ಮಾಡಿ ಪ್ರಾರಂಭ ಮಾಡಲಾಗುವುದು. ಆಶಾ ಕಾರ್ಯಕರ್ತೆಯರು ಸಮುದಾಯಕ್ಕೆ ಮತ್ತು ಆಸ್ಪತ್ರೆ ಆರೋಗ್ಯ ವ್ಯವಸ್ಥೆಗೆ ಒಂದು ಸೇತುವೆಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಈ ನಿಮ್ಮ ಕೆಲಸ ಇದೇ ರೀತಿ ಮುಂದುವರೆಯಲಿ ಎಂದು ಆಶಿಸಿ. ಇನ್ನೂ ಅನೇಕ ಸರ್ಕಾರದ ಕಾರ್ಯಕ್ರಮಗಳನ್ನು ಜನರಿಗೆ ಮುಟ್ಟುವಂತೆ ಪ್ರಾಮಾಣಿಕವಾಗಿ ಕೆಲಸ ಮಾಡಲು ಸಲಹೆ ನೀಡಿದರು. ಆಶಾ ಕಾರ್ಯಕರ್ತೆಯರಿಗೆ ಸುಮಾರು ನಾಲ್ಕು ವರ್ಷದಿಂದ ಸಂಬಳ ಹೆಚ್ಚಾಗದಿರುವ ಕಾರಣ ಮುಂದಿನ ದಿನಗಳಲ್ಲಿ ದೆಹಲಿಗೆ ಹೋದಾಗ ಸಚಿವರನ್ನು ಭೇಟಿ ಮಾಡಿ ವೇತನ ಹೆಚ್ಚು ಮಾಡಲು ಮನವಿ ಮಾಡುತ್ತೇನೆ ಎಂದು ತಿಳಿಸಿದರು.

ಮಾಯಕೊಂಡ ಕ್ಷೇತ್ರ ಶಾಸಕರಾದ ಕೆ.ಎಸ್ ಬಸವಂತಪ್ಪ ಮಾತನಾಡಿ. ಮೂಲಭೂತ ಸೌಕರ್ಯಗಳಿಂದ ವಂಚಿತವಾಗಿ ಮಾಯಕೊಂಡ, ಬಸವಪಟ್ಟಣ, ಅಣಜಿ ಈ ಮೂರು ಕ್ಷೇತ್ರಗಳಿಗೆ ಅವಶ್ಯವಿರುವ ಸಮುದಾಯ ಕೇಂದ್ರಗಳನ್ನು ಮಂಜೂರು ಮಾಡಿದರೆ ರೈತರಿಗೆ ಒಳ್ಳೆಯದಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಈ ಹಿಂದೆ ನಾಗಮ್ಮ ಕೇಶವಮೂರ್ತಿ ಅವರು ಪ್ರತಿಯೊಂದು ಊರಿಗೂ ಶಾಲೆ , ಆರೋಗ್ಯ ಕೇಂದ್ರಗಳನ್ನು ಮಾಡಿಸಿಕೊಟ್ಟಿದ್ದರು. ಈಗ ಅವುಗಳು ಶಿಥಿಲಗೊಂಡಿರುವ ಕಾರಣ ಅವುಗಳನ್ನು ಮತ್ತೆ ನವೀಕರಿಸಲು ಹೆಚ್ಚಿನ ಅನುದಾನ ನೀಡಬೇಕು ಎಂದು ಮನವಿ ಮಾಡಿದರು.

ಮಾಯಕೊಂಡ ಕ್ಷೇತ್ರಕ್ಕೆ ವಿಶೇಷ ಪ್ಯಾಕೇಜ್ ನೀಡಿದರೆ ರೈತರಿಗೆ ಒಳ್ಳೇದಾಗುತ್ತದೆ. ಈ ಭಾಗ ನೀರಾವರಿ ಆಗಿರುವುದರಿಂದ ಸುಮಾರು 40, 50 ವರ್ಷಗಳ ಹಿಂದೆ ನಿರ್ಮಾಣ ಮಾಡಿರುವ ಕಾಲುವೆ, ಗೇಟ್‌ಗಳು ಶಿಥಿಗೊಂಡಿರುವುದನ್ನು ಗಮನಿಸಿ, ಮುಖ್ಯಮಂತ್ರಿಯವರ ಬಳಿ ಮನವಿ ಮಾಡಿದ್ದು ನವೀಕರಣಕ್ಕಾಗಿ ರೂ.20 ಕೋಟಿ ಮಂಜೂರು ಮಾಡಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ, ಡಿ.ಎಚ್.ಓ ಷಣ್ಮುಖಪ್ಪ, ಭೂ ದಾನಿಯಾದ ಮಂಜಪ್ಪ ಹಾಗೂ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಸದಸ್ಯರು ಹಾಗೂ ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T